## 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 50
## ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2020
## ಪ್ರಕರಣಗಳ ಪಟ್ಟಿ

**ಪ್ರಕರಣಗಳು:**


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು
3. ಪ್ರಾಧಿಕಾರವನ್ನು ರಚಿಸುವುದು ಮತ್ತು ನಿಗಮಿತಗೊಳಿಸುವುದು
4. ಪ್ರಾಧಿಕಾರದ ಸಭೆಗಳು
5. ಪ್ರಾಧಿಕಾರ ಭದ್ರತಾ ದಳ
6. ರಾಜ್ಯಮಟ್ಟದ ಸಲಹಾ ಸಮಿತಿ
7. ಆಯುಕ್ತನ ನೇಮಕಾತಿ
8. ಆಯುಕ್ತನ ಕರ್ತವ್ಯಗಳು
9. ಲೆಕ್ಕಪತ್ರ ಅಧಿಕಾರಿ ಮತ್ತು ಇತರ ಅಧಿಕಾರಿಗಳ ನೇಮಕಾತಿ
10. ಅಧಿಕಾರಿಗಳು ಮತ್ತು ಸಿಬ್ಬಂದಿಯ ನೇಮಕಾತಿ ವಿಧಾನ ಮತ್ತು ಸೇವಾ ಷರತ್ತುಗಳು
11. ಪ್ರಾಧಿಕಾರದ ಪ್ರಕಾರ್ಯಗಳು
12. ಅಧ್ಯಕ್ಷರ ವಿಶೇಷ ಅಧಿಕಾರಗಳು
13. ಪ್ರತ್ಯಾಯೋಜನೆಗೆ ಅಧಿಕಾರ
14. ಪ್ರಾಧಿಕಾರದ ಅನುಮತಿ ಇಲ್ಲದೆ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಕೂಡದು
15. ಪ್ರವೇಶಕ್ಕೆ ಅಧಿಕಾರ
16. ಶುಲ್ಕ ವಿಧಿಸುವುದು
17. ಪ್ರಾಧಿಕಾರದ ನಿಧಿ
18. ಆಯವ್ಯಯ
19. ವಾರ್ಷಿಕ ವರದಿ
20. ಪ್ರಾಧಿಕಾರಕ್ಕೆ ಧನ ಸಹಾಯ ಮತ್ತು ಸಾಲಗಳು
21. ಸಾಲವನ್ನು ಪಡೆಯಲು ಪ್ರಾಧಿಕಾರಕ್ಕೆ ಇರುವ ಅಧಿಕಾರ
22. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ
23. ಪ್ರಾಧಿಕಾರದಿಂದ ನಿರ್ದೇಶನಗಳು
24. ಅಧಿನಿಯಮದ ಉಪಬಂಧಗಳ ಉಲ್ಲಂಘನೆಗಾಗಿ ದಂಡ
25. ಕಂಪನಿಗಳಿಂದ ಅಪರಾಧಗಳು
26. ಅಭಿಯೋಜನೆಗಾಗಿ ಅನುಮತಿ
27. ಪ್ರಾಧಿಕಾರವು ತನ್ನ ಅಥವಾ ಅದರ ವಿರುದ್ಧದ ಕ್ಲೇಮುಗಳನ್ನು ಸಂಧಾನ ಮಾಡಿಕೊಳ್ಳುವುದು
28. ಸದಸ್ಯರು ಮತ್ತು ಅಧಿಕಾರಿಗಳು ಲೋಕ ನೌಕರರಾಗಿರುವುದು
29. ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ
30. ರಾಜ್ಯ ಸರ್ಕಾರದಿಂದ ನಿಯಂತ್ರಣ, ಇತ್ಯಾದಿ
31. ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ 1974ನ್ನು (1974ರ ಕರ್ನಾಟಕ ಅಧಿನಿಯಮ 32) ಪ್ರಾಧಿಕಾರದ ಆವರಣಕ್ಕೆ ಅನ್ವಯಿಸುವುದು

32. ಅಧಿನಿಯಮವು ಇತರ ಕಾನೂನುಗಳಿಗೆ ಅಧ್ಯಾರೋಹಿಯಾಗಿರುವುದು
33. ಅನುಸೂಚಿಯನ್ನು ತಿದ್ದುಪಡಿ ಮಾಡುವ ಅಧಿಕಾರ
34. ನಿಯಮಗಳ ರಚನಾಧಿಕಾರ
35. ವಿನಿಯಮಗಳನ್ನು ರಚಿಸುವ ಅಧಿಕಾರ
36. ತೊಂದರೆಗಳ ನಿವಾರಣೆ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**ಅಧಿನಿಯಮ ಸಂಖ್ಯೆ 2020ರ 50**- ಲಕ್ಕುಂಡಿ ಪರಂಪರೆ ಪ್ರದೇಶ ಅಭಿವೃದ್ಧಿ ಪ್ರಾದಿಕಾರವನ್ನು,-

(i) ಪಾರಂಪರಿಕ ಪ್ರದೇಶದ ಜೊತೆಗೆ ಅದರ ಎಲ್ಲಾ ಪುರಾತತ್ವ ಅವಶೇಷಗಳು ಮತ್ತು ಸುತ್ತುವರಿದ ನೈಸರ್ಗಿಕ ಪರಿಸರವನ್ನು ಸಂರಕ್ಷಿಸುವುದಕ್ಕಾಗಿ;

(ii) ಸಾಂಸ್ಕೃತಿಕ ಅನನ್ಯತೆಯನ್ನು ರಕ್ಷಿಸುವುದಕ್ಕೆ

(iii) ಪಾರಂಪರಿಕ ಪ್ರದೇಶದ ಸುಸ್ಥಿರ ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳುವುದಕ್ಕೆ ಹಾಗೂ ಪ್ರವಾಸೋದ್ಯಮವನ್ನು ಉತ್ತೇಜಿಸಲು; ಮತ್ತು

(iv) ಪಾರಂಪರಿಕ ಪ್ರದೇಶದ ಅನಿಯಂತ್ರಿತ ಅಭಿವೃದ್ಧಿ ಮತ್ತು ವಾಣಿಜ್ಯಾತ್ಮಕ ಶೋಷಣೆಯನ್ನು ತಡೆಯಲು.

- ರಚಿಸುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

[2020ರ ವಿಧಾನಸಭೆಯ ವಿಧೇಯಕ ಸಂಖ್ಯೆ: 59, ಕಡತ ಸಂಖ್ಯೆ: ಸಂವ್ಯಶಾಇ 68 ಶಾಸನ 2020]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 5 ಮತ್ತು 32ನೇಯ ನಮೂದನೆಯಡಿಯಲ್ಲಿ ಬರುತ್ತದೆ]
[ಕರ್ನಾಟಕ ರಾಜ್ಯ ಪತ್ರದ ಭಾಗ-IVA, ವಿಶೇಷ ಪತ್ರಿಕೆ ಸಂಖ್ಯೆ: 493 ದಿನಾಂಕ: 22.10.2020ರಲ್ಲಿ ಪ್ರಕಟಣೆಗೊಂಡಿದೆ]

## 2020 ರ ಕರ್ನಾಟಕ ಅಧಿನಿಯಮ ಸಂಖ್ಯೆ: 50

(2020 ರ ಅಕ್ಟೋಬರ್ ತಿಂಗಳ 22ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2020

(2020 ರ ಅಕ್ಟೋಬರ್ ತಿಂಗಳ 22ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯದಲ್ಲಿ, ಲಕ್ಕುಂಡಿಯ ಪಾರಂಪರಿಕ ಪ್ರದೇಶದ ಜೊತೆಗೆ ಅದರ ಎಲ್ಲಾ ಪುರಾತತ್ವ ಅವಶೇಷಗಳು ಮತ್ತು ಸುತ್ತುವರಿದ ನೈಸರ್ಗಿಕ ಪರಿಸರವನ್ನು ಸಂರಕ್ಷಿಸುವುದಕ್ಕಾಗಿ ಹಾಗೂ ಅದರ ಸಾಂಸ್ಕೃತಿಕ ಅನನ್ಯತೆಯನ್ನು ರಕ್ಷಿಸುವುದಕ್ಕೆ ಮತ್ತು ಲಕ್ಕುಂಡಿ ಪಾರಂಪರಿಕ ಪ್ರದೇಶದ ಸುಸ್ಥಿರ ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳುವುದಕ್ಕೆ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸುವುದಕ್ಕಾಗಿ ಒಂದು ಅಧಿನಿಯಮ.

ಕರ್ನಾಟಕ ರಾಜ್ಯದಲ್ಲಿ, ಲಕ್ಕುಂಡಿ ಪಾರಂಪರಿಕ ಪ್ರದೇಶದ ಜೊತೆಗೆ ಅದರ ಎಲ್ಲಾ ಪುರಾತತ್ವ ಅವಶೇಷಗಳು ಮತ್ತು ಸುತ್ತುವರಿದ ನೈಸರ್ಗಿಕ ಪರಿಸರವನ್ನು ಸಂರಕ್ಷಿಸುವುದಕ್ಕಾಗಿ ಹಾಗೂ ಅದರ ಸಾಂಸ್ಕೃತಿಕ ಅನನ್ಯತೆಯನ್ನು ರಕ್ಷಿಸುವುದಕ್ಕೆ ಮತ್ತು ಲಕ್ಕುಂಡಿ ಪಾರಂಪರಿಕ ಪ್ರದೇಶದ ಸುಸ್ಥಿರ ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳುವುದಕ್ಕೆ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲು ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

### ಅಧ್ಯಾಯ-I

### ಪ್ರಾಥಮಿಕ

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ಈ ಅಧಿನಿಯಮದ ಉಪಬಂಧಗಳು ರಾಜ್ಯ ಸರ್ಕಾರವು, [1][ಅಧಿಸೂಚನೆಯ][1] ಮೂಲಕ, ಗೊತ್ತುಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

1. ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ: TOR/91/TDA/2020 ದಿನಾಂಕ 22.12.2020 ರ ಮೂಲಕ ದಿನಾಂಕ 21.12.2020 ರಿಂದ ಜಾರಿಗೆ ಬಂದಿರುತ್ತದೆ. (ಅಧಿಸೂಚನೆಯನ್ನು ಅಧಿನಿಯಮದ ಕೊನೆಯಲ್ಲಿ ನೋಡಬಹುದು)

**2. ಪರಿಭಾಷೆಗಳು.-** (1) ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

**(ಎ) "ಸೌಕರ್ಯ"** ಎಂಬುದು ರಸ್ತೆಗಳು, ಸೇತುವೆಗಳು, ಬೀದಿಗಳು, ಸಾರಿಗೆ, ದೀಪದ ವ್ಯವಸ್ಥೆ, ನೀರು ಮತ್ತು ವಿದ್ಯುಚ್ಛಕ್ತಿ ಸರಬರಾಜು, ಒಳಚರಂಡಿ ವ್ಯವಸ್ಥೆ, ಚರಂಡಿ ವ್ಯವಸ್ಥೆ, ಲೋಕೋಪಯೋಗಿ ಕಾಮಗಾರಿಗಳು, ಖಾಲಿ ಜಾಗಗಳು, ಮನೋರಂಜನಾ ಮೈದಾನಗಳು, ಉದ್ಯಾನಗಳು ಮತ್ತು ಇತರ ಅನುಕೂಲಗಳು, ಸೇವೆಗಳು ಅಥವಾ ಬಳಕೆಗಳು ಇವುಗಳನ್ನು ಒಳಗೊಳ್ಳುತ್ತದೆ;

**(ಬಿ) "ಪ್ರಾಧಿಕಾರ"** ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ;

**(ಸಿ) "ಅಧ್ಯಕ್ಷ"** ಎಂದರೆ, ಪ್ರಾಧಿಕಾರದ ಅಧ್ಯಕ್ಷ;

**(ಡಿ) "ಸಮಿತಿ"** ಎಂದರೆ, 6ನೇ ಪ್ರಕರಣದ ಅಡಿಯಲ್ಲಿ ಸ್ಥಾಪನೆಯಾದ ರಾಜ್ಯಮಟ್ಟದ ಸಲಹಾ ಸಮಿತಿ;

**(ಇ) "ಆಯುಕ್ತ"** ಎಂದರೆ, 7ನೇ ಪ್ರಕರಣದ ಅಡಿಯಲ್ಲಿ ನೇಮಕ ಮಾಡಲಾದ ಪ್ರಾಧಿಕಾರದ ಆಯುಕ್ತ;

**(ಎಫ್)** ವ್ಯಾಕರಣ ವ್ಯತ್ಯಾಸಗಳೊಂದಿಗೆ **"ಅಭಿವೃದ್ಧಿ"** ಎಂದರೆ, ಪಾರಂಪರಿಕ ಪ್ರದೇಶದಲ್ಲಿನ ಯಾವುದೇ ಭೂಮಿಯಲ್ಲಿ ಅಥವಾ ಅದರ ಮೇಲೆ ಅಥವಾ ಅದರ ಕೆಳಗೆ ಕೈಗೊಳ್ಳುವ ಕಟ್ಟಡ, ಇಂಜಿನಿಯರಿಂಗ್ ಅಥವಾ ಇತರ ಕಾರ್ಯಾಚರಣೆಗಳು ಅಥವಾ ಯಾವುದೇ ಕಟ್ಟಡದಲ್ಲಿ ಅಥವಾ ಭೂಮಿಯಲ್ಲಿ ಅಥವಾ ಯಾವುದೇ ಕಟ್ಟಡ ಅಥವಾ ಭೂಮಿಯ ಬಳಕೆಯಲ್ಲಿ ಯಾವುದೇ ಮುಖ್ಯ ಬದಲಾವಣೆ ಮಾಡುವುದು ಮತ್ತು ಇದರಲ್ಲಿ ಸೌಲಭ್ಯಗಳೂ ಒಳಗೊಂಡಂತೆ ಪುನರಭಿವೃದ್ಧಿ ಮಾಡುವುದು ಮತ್ತು ಬಡಾವಣೆಗಳ ರಚನೆ ಮಾಡುವುದು ಮತ್ತು ಯಾವುದೇ ಭೂಮಿಯ ಒಳ ವಿಭಾಗ ಮಾಡುವುದನ್ನು ಒಳಗೊಳ್ಳುತ್ತದೆ;

**(ಜಿ) "ನಿಧಿ"** ಎಂದರೆ, ಪ್ರಾಧಿಕಾರದ ನಿಧಿ;

**(ಎಚ್) "ಪಾರಂಪರಿಕ ಪ್ರದೇಶ"** ಎಂದರೆ, ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಹಾಗೂ ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ 24) ಅಡಿಯಲ್ಲಿ ರಕ್ಷಿತ ಪ್ರದೇಶವೆಂದು ಉಲ್ಲೇಖಿಸಲಾದ ಪ್ರದೇಶವನ್ನು ಹೊರತುಪಡಿಸಿ, ಆದರೆ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಪ್ರದೇಶ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ಅಧಿಸೂಚಿಸಬಹುದಾದ ಅಂಥ ಇತರ ಪ್ರದೇಶಗಳನ್ನು ಒಳಗೊಳ್ಳುವ ಸಂಪೂರ್ಣ ಪ್ರದೇಶ;

**(ಐ) "ಭೂಮಿ"** ಎಂಬುದು, ಭೂಮಿಯಿಂದ ಮತ್ತು ಭೂಮಿಗೆ ಹೊಂದಿಕೊಂಡ ವಸ್ತುಗಳು ಅಥವಾ ಭೂಮಿಗೆ ಹೊಂದಿಕೊಂಡು ಶಾಶ್ವತವಾಗಿ ಅಂಟಿಕೊಂಡ ಯಾವುದೇ ವಸ್ತುಗಳಿಂದ ದೊರೆಯುವ ಪ್ರಯೋಜನಗಳನ್ನು ಒಳಗೊಳ್ಳುತ್ತದೆ;

**(ಜೆ) "ನೈಸರ್ಗಿಕ ಪರಿಸರ"** ಎಂಬುದು ಪಾರಂಪರಿಕ ಪ್ರದೇಶದಲ್ಲಿ ಇರುವ ನದಿಗಳು, ನದಿ ಪಾತ್ರಗಳು, ಬಂಡೆಗಲ್ಲುಗಳು, ನೀರಿನ ಮೂಲಗಳು, ವನ್ಯಜೀವಿಗಳು ಮತ್ತು ಸಸ್ಯವರ್ಗಗಳನ್ನು ಒಳಗೊಳ್ಳುತ್ತದೆ;

**(ಕೆ) "ಪ್ರೆಸಿಡೆಂಟ್"** ಎಂದರೆ, ಸಮಿತಿಯ ಪ್ರೆಸಿಡೆಂಟ್;

**(ಎಲ್) "ವಿನಿಯಮಗಳು"** ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಲಾದ ವಿನಿಯಮಗಳು; ಮತ್ತು

**(ಎಂ) "ಅನುಸೂಚಿ"** ಎಂದರೆ, ಈ ಅಧಿನಿಯಮಕ್ಕೆ ಲಗತ್ತಿಸಿದ ಅನುಸೂಚಿ.

## ಅಧ್ಯಾಯ - II

## ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ

**3. ಪ್ರಾಧಿಕಾರವನ್ನು ರಚಿಸುವುದು ಮತ್ತು ನಿಗಮಿತಗೊಳಿಸುವುದು.-** (1) ರಾಜ್ಯ ಸರ್ಕಾರವು, ಈ ಅಧಿನಿಯಮವು ಪ್ರಾರಂಭವಾದ ತರುವಾಯ, ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವೆಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು, ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಚರ ಮತ್ತು ಸ್ಥಿರ ಸ್ವತ್ತುಗಳೆರಡರ ಹಿಡಿತವನ್ನು ಆರ್ಜಿಸುವ ಮತ್ತು ವಿಲೇ ಮಾಡುವ ಹಾಗೂ ಸದರಿ ಹೆಸರಿನಿಂದ ದಾವೆ ಹೂಡುವ ಅಥವಾ ದಾವೆಗೊಳಗಾಗುವ ಅಧಿಕಾರವಿರುವ ಮತ್ತು ನಿರಂತರ ಉತ್ತರಾಧಿಕಾರವನ್ನು ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ ಮೇಲ್ಕಂಡ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು.

(3) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

| | | |
|---|---|---|
| (ಎ) | ಜಿಲ್ಲಾಧಿಕಾರಿ, ಗದಗ ಜಿಲ್ಲೆ | ಅಧ್ಯಕ್ಷ |
| (ಬಿ) | ಆಯುಕ್ತರು, ಪುರಾತತ್ವ, ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು | ಸದಸ್ಯ |
| (ಸಿ) | ನಿರ್ದೇಶಕರು, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಇಲಾಖೆ, ಬೆಂಗಳೂರು | ಸದಸ್ಯ |
| (ಡಿ) | ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು | ಸದಸ್ಯ |
| (ಇ) | ಪೋಲೀಸ್ ಸೂಪರಿಂಟೆಂಡೆಂಟ್, ಗದಗ | ಸದಸ್ಯ |
| (ಎಫ್) | ಅಧೀಕ್ಷಕ ಪುರಾತತ್ವಜ್ಞ, ಭಾರತೀಯ ಪುರಾತತ್ವ ಸರ್ವೇಕ್ಷಣೆ, ಧಾರವಾಡ ವೃತ್ತ, ಧಾರವಾಡ | ಸದಸ್ಯ |
| (ಜಿ) | ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತಿ, ಗದಗ | ಸದಸ್ಯ |
| (ಎಚ್) | ಅರಣ್ಯ ಉಪ ಸಂರಕ್ಷಕ, ಗದಗ | ಸದಸ್ಯ |
| (ಐ) | ಆಯುಕ್ತ, ನಗರಾಭಿವೃದ್ಧಿ ಪ್ರಾಧಿಕಾರ, ಗದಗ | ಸದಸ್ಯ |
| (ಜೆ) | ಸೂಪರಿಂಟೆಂಡೆಂಟ್ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಗದಗ | ಸದಸ್ಯ |
| (ಕೆ) | ಉಪ ಪರಿಸರ ಅಧಿಕಾರಿ, ಗದಗ | ಸದಸ್ಯ |
| (ಎಲ್) | ಕಾರ್ಯ ಪಾಲಕ ಇಂಜಿನಿಯರ್, ಜಲಸಂಪನ್ಮೂಲ ಇಲಾಖೆ, ಗದಗ | ಸದಸ್ಯ |
| (ಎಂ) | ಪುರಾತತ್ವ ಶಾಖೆಯ ಮುಖ್ಯಸ್ಥರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | ಸದಸ್ಯ |
| (ಎನ್) | ಪ್ರಾಧಿಕಾರದ ಆಯುಕ್ತ | ಸದಸ್ಯ ಕಾರ್ಯದರ್ಶಿ |

(4) ಪ್ರಾಧಿಕಾರದ ಕೇಂದ್ರ ಕಚೇರಿಯು ಗದಗಿನಲ್ಲಿ ಇರತಕ್ಕದ್ದು.

**4. ಪ್ರಾಧಿಕಾರದ ಸಭೆಗಳು.-** (1) ಪ್ರಾಧಿಕಾರದ ಅಧ್ಯಕ್ಷರ ವ್ಯಕ್ತ ಅನುಮೋದನೆಯೊಂದಿಗೆ ಅಧ್ಯಕ್ಷರು ಅಥವಾ ಕಾರ್ಯದರ್ಶಿಯವರು ಪ್ರಾಧಿಕಾರದ ಸಭೆಗಳನ್ನು ಕರೆಯತಕ್ಕದ್ದು ಮತ್ತು ಅಧ್ಯಕ್ಷರು ನಿರ್ಧರಿಸಬಹುದಾದ ಅಂಥ ಸ್ಥಳದಲ್ಲಿ ಅಥವಾ ಪ್ರಾಧಿಕಾರದ ಅಧಿಕಾರವ್ಯಾಪ್ತಿ ಪ್ರದೇಶದಲ್ಲಿ ಅಥವಾ ಪ್ರಾಧಿಕಾರದ ಕೇಂದ್ರಸ್ಥಾನದಲ್ಲಿ ಮತ್ತು ಅಂಥ ಸಮಯದಲ್ಲಿ ಸಾಮಾನ್ಯವಾಗಿ ಕನಿಷ್ಠ ಮೂರು ತಿಂಗಳಿಗೊಮ್ಮೆ ಅದು ಸಭೆ ಸೇರತಕ್ಕದ್ದು.

(2) ವಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ, ಸಭೆಗಳ ಕೋರಂ ಒಳಗೊಂಡು ತನ್ನ ಸಭೆಯ ಕಾರ್ಯಕಲಾಪಗಳಿಗೆ ಸಂಬಂಧಿಸಿದ ಕಾರ್ಯವಿಧಾನದ ಅಂಥ ನಿಯಮಗಳನ್ನು ಪ್ರಾಧಿಕಾರವು ಪಾಲಿಸತಕ್ಕದ್ದು.

(3) ಅಧ್ಯಕ್ಷನು ಅಥವಾ ಯಾವುದೇ ಕಾರಣಕ್ಕಾಗಿ ಯಾವುದೇ ಸಭೆಗೆ ಅವನು ಹಾಜರಾಗಲು ಸಾಧ್ಯವಾಗದಿದ್ದಲ್ಲಿ, ಉಪಾಧ್ಯಕ್ಷನು ಅಥವಾ ಯಾವುದೇ ಕಾರಣಕ್ಕಾಗಿ ಯಾವುದೇ ಸಭೆಗೆ ಅವನು ಸಹ ಹಾಜರಾಗಲು ಸಾಧ್ಯವಾಗದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಆಯ್ಕೆ ಮಾಡಿದ ಯಾವೊಬ್ಬ ಇತರ ಸದಸ್ಯನು ಪ್ರಾಧಿಕಾರದ ಸಭೆಯ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(4) ಪ್ರಾಧಿಕಾರದ ಯಾವುದೇ ಸಭೆಯ ಮುಂದೆ ಬರುವ ಎಲ್ಲಾ ಪ್ರಶ್ನೆಗಳನ್ನು ಹಾಜರಿರುವ ಸದಸ್ಯರು ಬಹುಮತದಿಂದ ಮತ್ತು ತಮ್ಮ ಮತ ಹಾಕುವ ಮೂಲಕ ನಿರ್ಧರಿಸತಕ್ಕದ್ದು ಹಾಗೂ ಮತಗಳು ಸಮಾನವಾಗಿರುವ ಸಂದರ್ಭದಲ್ಲಿ, ಅಧ್ಯಕ್ಷ ಅಥವಾ ಆತನ ಗೈರು ಹಾಜರಿಯಲ್ಲಿ ಅಧ್ಯಕ್ಷತೆ ವಹಿಸಿರುವ ಸದಸ್ಯನು ಎರಡನೆಯ ಅಥವಾ ನಿರ್ಣಾಯಕ ಮತವನ್ನು ಹೊಂದಿರತಕ್ಕದ್ದು ಮತ್ತು ಚಲಾಯಿಸತಕ್ಕದ್ದು.

**5. ಪ್ರಾಧಿಕಾರ ಭದ್ರತಾ ದಳ.-** (1) ಪ್ರಾಧಿಕಾರ ಭದ್ರತಾ ದಳ ಎಂದು ಕರೆಯುವ ಒಂದು ದಳವನ್ನು,-

(i) ಪಾರಂಪರಿಕ ಪ್ರದೇಶದೊಳಗೆ ಒತ್ತುವರಿಯನ್ನು ತಡೆಗಟ್ಟುವುದು ಹಾಗೂ ಅದನ್ನು ತೆರವುಗೊಳಿಸುವುದನ್ನು ಒಳಗೊಂಡು ಅದಕ್ಕೆ ಸೇರಿದ ಸಾರ್ವಜನಿಕ ಸ್ವತ್ತಿನ ಉತ್ತಮ ರಕ್ಷಣೆ ಮತ್ತು ಭದ್ರತೆಗಾಗಿ;

(ii) ಪ್ರಾಧಿಕಾರಕ್ಕೆ ಸಂದಾಯವಾಗಬಹುದಾದ ರಾಜಸ್ವ ಅಥವಾ ಯಾವುದೇ ಮೊತ್ತದ ಸೋರಿಕೆಗೆ ಸಂಬಂಧಿಸಿದ ಯಾವುದೇ ವಿಷಯವನ್ನು ಪತ್ತೆ ಹಚ್ಚುವುದಕ್ಕಾಗಿ ಮತ್ತು ತನಿಖೆಯಲ್ಲಿ ಪ್ರಾಧಿಕಾರದ ಅಧಿಕಾರಿಗಳಿಗೆ ನೆರವು ನೀಡುವುದಕ್ಕಾಗಿ;

(iii) ಈ ಅಧಿನಿಯಮ ಅಥವಾ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961(1963ರ ಕರ್ನಾಟಕ ಅಧಿನಿಯಮ 11) ರಡಿ ರಚಿಸಿದ ಯಾವುದೇ ನಿಯಮ ಅಥವಾ ವಿನಿಯಮ ಅಥವಾ ಆದೇಶದ ಅಡಿಯಲ್ಲಿ ಯಾವೊಬ್ಬ ವ್ಯಕ್ತಿಯು ಯಾವುದೇ ಅಪರಾಧ ಎಸಗಿರುವುದಕ್ಕೆ ಅಥವಾ ಎಸಗುವುದಕ್ಕೆ ಮಾಡಿದ ಯಾವುದೇ ಸಂಚಿಗೆ ಸಂಬಂಧಿಸಿದಂತೆ ಯಾವುದೇ ಮಾಹಿತಿಯನ್ನು ಪರಿಣಾಮಕಾರಿಯಾಗಿ ತಿಳಿಸುವುದಕ್ಕಾಗಿ ಮತ್ತು ಪಡೆಯುವುದಕ್ಕಾಗಿ;

(iv) ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸುವುದಕ್ಕಾಗಿ ಮತ್ತು ಅಂಥ ಇತರ ಪ್ರಕಾರ್ಯಗಳನ್ನು ನೆರವೇರಿಸುವುದಕ್ಕಾಗಿ,

- ರಚಿಸತಕ್ಕದ್ದು ಮತ್ತು ನಿರ್ವಹಿಸತಕ್ಕದ್ದು.

(2) ಪ್ರಾಧಿಕಾರದ ಭದ್ರತಾ ದಳವು, ಪ್ರಾಧಿಕಾರವು ನಿರ್ಧರಿಸಬಹುದಾದ ಅಂಥ ಸಂಖ್ಯೆಯ ಮೇಲ್ವಿಚಾರಣಾ ಅಧಿಕಾರಿಗಳು ಮತ್ತು ಸದಸ್ಯರುಗಳನ್ನು ಒಳಗೊಂಡಿರತಕ್ಕದ್ದು ಮತ್ತು ರಾಜ್ಯ ಸರ್ಕಾರವು ಅವರನ್ನು ಒದಗಿಸತಕ್ಕದ್ದು.

(3) ಅಧ್ಯಕ್ಷರು, ಮೇಲುಸ್ತುವಾರಿ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಪ್ರಾಧಿಕಾರದ ಭದ್ರತಾ ದಳದ ಮೇಲೆ ನಿಯಂತ್ರಣ ಹೊಂದಿರತಕ್ಕದ್ದು.

**6. ರಾಜ್ಯಮಟ್ಟದ ಸಲಹಾ ಸಮಿತಿ.-** (1) ರಾಜ್ಯಮಟ್ಟದ ಸಲಹಾ ಸಮಿತಿಯು ಈ ಮುಂದಿನ ಸದಸ್ಯರುಗಳನ್ನು ಹೊಂದಿರತಕ್ಕದ್ದು, ಎಂದರೆ:-

| | | |
|---|---|---|
| (ಎ) | ಪ್ರವಾಸೋದ್ಯಮದ ಪ್ರಭಾರ ಹೊಂದಿರುವ ಮಂತ್ರಿಗಳು | ಪ್ರೆಸಿಡೆಂಟ್ |
| (ಬಿ) | ಗದಗ ಜಿಲ್ಲಾ ಉಸ್ತುವಾರಿ ಮಂತ್ರಿಗಳು | ಉಪಾಧ್ಯಕ್ಷ |
| (ಸಿ) | ಕನ್ನಡ ಮತ್ತು ಸಂಸ್ಕೃತಿ ಪ್ರಭಾರ ಹೊಂದಿರುವ ಮಂತ್ರಿಗಳು | ಉಪಾಧ್ಯಕ್ಷ |
| (ಡಿ) | ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಮತಕ್ಷೇತ್ರದ ಮತ್ತು ಆ ಪ್ರದೇಶದಲ್ಲಿ ಮತದಾರರಾಗಿ ಹೆಸರನ್ನು ನೋಂದಾಯಿಸಿಕೊಂಡಿರುವ ಪಾರಂಪರಿಕ ಪ್ರದೇಶವನ್ನು ಭಾಗಶಃವಾಗಿ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಸಂಸತ್ ಸದಸ್ಯರು ಮತ್ತು ರಾಜ್ಯ ವಿಧಾನ ಮಂಡಲದ ಸದಸ್ಯರು | ಸದಸ್ಯ |
| (ಇ) | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತ, ಕರ್ನಾಟಕ ಸರ್ಕಾರ | ಪದನಿಮಿತ್ತ ಸದಸ್ಯ |
| (ಎಫ್) | ಪ್ರಧಾನ ನಿರ್ದೇಶಕ, ಭಾರತೀಯ ಪುರಾತತ್ವ ಸರ್ವೇಕ್ಷಣೆ ಅಥವಾ ಅವರ ಪ್ರತಿನಿಧಿ | ಪದನಿಮಿತ್ತ ಸದಸ್ಯ |
| (ಜಿ) | ಆರ್ಥಿಕ ಇಲಾಖೆಯ ಪ್ರಭಾರ ಹೊಂದಿರುವ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಅವರ ನಾಮ ನಿರ್ದೇಶಿತರು | ಪದನಿಮಿತ್ತ ಸದಸ್ಯ |
| (ಎಚ್) | ಪ್ರವಾಸೋದ್ಯಮದ ಪ್ರಭಾರ ಹೊಂದಿರುವ ಸರ್ಕಾರದ ಕಾರ್ಯದರ್ಶಿ | ಪದನಿಮಿತ್ತ ಸದಸ್ಯ |
| (ಐ) | ಪ್ರಾಧಿಕಾರದ ಅಧ್ಯಕ್ಷ | ಪದನಿಮಿತ್ತ ಸದಸ್ಯ |
| (ಜೆ) | ನಿರ್ದೇಶಕ, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ, ಕರ್ನಾಟಕ ಸರ್ಕಾರ | ಪದನಿಮಿತ್ತ ಸದಸ್ಯ |
| (ಕೆ) | ಆಯುಕ್ತ, ಪುರಾತತ್ವ ವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ | ಪದನಿಮಿತ್ತ ಸದಸ್ಯ |
| (ಎಲ್) | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಭಾರ ಹೊಂದಿರುವ ಸರ್ಕಾರದ ಕಾರ್ಯದರ್ಶಿ | ಸದಸ್ಯ ಕಾರ್ಯದರ್ಶಿ |

(2) ರಾಜ್ಯಮಟ್ಟದ ಸಮಿತಿಯು ಪರಂಪರೆ, ಪುರಾತತ್ವ, ಪ್ರವಾಸೋದ್ಯಮ ಅಥವಾ ಪರಿಸರ ಕ್ಷೇತ್ರದಲ್ಲಿ ತಜ್ಞರಾದ ನಾಲ್ವರು ವ್ಯಕ್ತಿಗಳನ್ನು ಸಹಸದಸ್ಯರನ್ನಾಗಿ ಆಯ್ಕೆ ಮಾಡಿಕೊಳ್ಳಬಹುದು.

(3) ಸಮಿತಿಯು,-

(ಎ) ಪ್ರಾಧಿಕಾರದ ಕಾರ್ಯಚಟುವಟಿಕೆಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಮೇಲ್ವಿಚಾರಣೆ ಮಾಡತಕ್ಕದ್ದು ಹಾಗೂ ಪಾರಂಪರಿಕ ಪ್ರದೇಶದೊಳಗಿನ ಸಾಂಸ್ಕೃತಿಕ ಪರಂಪರೆಯ ಮತ್ತು ನೈಸರ್ಗಿಕ ಪರಿಸರದ ಸಂರಕ್ಷಣೆಗೆ ಸಂಬಂಧಿಸಿದ ಎಲ್ಲಾ ವಿಷಯಗಳ ಮೇಲೆ ಪ್ರಾಧಿಕಾರಕ್ಕೆ ಸಲಹೆ ನೀಡತಕ್ಕದ್ದು;

(ಬಿ) ವಾರ್ಷಿಕ ಯೋಜನೆ ಮತ್ತು ಆಯವ್ಯಯವನ್ನು ಅನುಮೋದಿಸತಕ್ಕದ್ದು ಮತ್ತು

(ಸಿ) ಮಾರ್ಪಾಡು ಮಾಡಿ ಅಥವಾ ಮಾರ್ಪಾಟು ಮಾಡದೆ ಐದು ಕೋಟಿಗಳ ಮೇಲಿನ ವೆಚ್ಚವನ್ನು ಅನುಮೋದಿಸತಕ್ಕದ್ದು.

(4) ಸಮಿತಿಯು, ನಿಯಮಿಸಬಹುದಾದ ಅಂಥ ಸ್ಥಳದಲ್ಲಿ ಮತ್ತು ಅಂಥ ಸಮಯದಲ್ಲಿ ಹಾಗೂ ಅಂಥ ಕಾರ್ಯವಿಧಾನವನ್ನು ಅಳವಡಿಸಿಕೊಂಡು ಕನಿಷ್ಟ ಪಕ್ಷ ಆರು ತಿಂಗಳಿಗೊಮ್ಮೆ ಸಭೆ ಸೇರತಕ್ಕದ್ದು.

## ಅಧ್ಯಾಯ - III

## ಪ್ರಾಧಿಕಾರದ ಅಧಿಕಾರಿಗಳು ಮತ್ತು ಅವರ ಕರ್ತವ್ಯಗಳು

**7. ಆಯುಕ್ತನ ನೇಮಕಾತಿ.-** ರಾಜ್ಯ ಸರ್ಕಾರವು, ಐತಿಹಾಸಿಕ ಮತ್ತು ಸಾಂಸ್ಕೃತಿಕ ಅಭಿವೃದ್ಧಿಯ ಬಗ್ಗೆ ಪರಿಜ್ಞಾನವಿರುವ, ರಾಜ್ಯ ಸಿವಿಲ್ ಸೇವೆಯ ಗ್ರೂಪ್-ಎ (ಹಿರಿಯ ಶ್ರೇಣಿ) ದರ್ಜೆಗಿಂತ ಕಡಿಮೆಯಲ್ಲದ ಒಬ್ಬ ಅಧಿಕಾರಿಯನ್ನು ಅಥವಾ ಯಾವುದೇ ಸ್ಥಳೀಯ ಪ್ರಾಧಿಕಾರದ ಮುಖ್ಯಸ್ಥನನ್ನು ಅಥವಾ ಪ್ರಾಧ್ಯಾಪಕನ ಹುದ್ದೆಗಿಂತ ಕಡಿಮೆಯಿರದ ಹುದ್ದೆಯಲ್ಲಿ ವಿಶ್ವವಿದ್ಯಾನಿಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಬ್ಬ ವ್ಯಕ್ತಿಯನ್ನು ಪ್ರಾಧಿಕಾರದ ಆಯುಕ್ತನನ್ನಾಗಿ ನೇಮಿಸತಕ್ಕದ್ದು.

**8. ಆಯುಕ್ತನ ಕರ್ತವ್ಯಗಳು.-** (1) ಆಯುಕ್ತನು, ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಕ ಮತ್ತು ಆಡಳಿತಾತ್ಮಕ ಅಧಿಕಾರಿಯಾಗಿರತಕ್ಕದ್ದು.

(2) ಆಯುಕ್ತನು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಆತನಿಗೆ ಪ್ರದತ್ತವಾದ ಅಂಥ ಪ್ರಕಾರ್ಯಗಳನ್ನು ನೆರವೇರಿಸುವುದರ ಜೊತೆಗೆ,-

(ಎ) ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾಗಿರತಕ್ಕದ್ದು;

(ಬಿ) ಪ್ರಾಧಿಕಾರದ ಎಲ್ಲಾ ಆಯವ್ಯಯ ಯೋಜನೆ, ಜಾರಿ ಮತ್ತು ಮೇಲ್ವಿಚಾರಣೆ ಪ್ರಕಾರ್ಯಗಳಿಗೆ ಜವಾಬ್ದಾರನಾಗಿರತಕ್ಕದ್ದು;

(ಸಿ) ಪ್ರಾಧಿಕಾರದ ಆಡಳಿತ ಮತ್ತು ಲೆಕ್ಕಪತ್ರಗಳಿಗೆ ಸಂಬಂಧಿಸಿದ ಎಲ್ಲಾ ಮಾಹಿತಿಯನ್ನು ಪ್ರಾಧಿಕಾರವು ಮತ್ತು ಹಾಗೆ ಮಾಡಬೇಕೆಂದು ಪ್ರಾಧಿಕಾರವು ಆದೇಶಿಸಿದ ಇತರ ವಿಷಯಗಳನ್ನು ಪ್ರಾಧಿಕಾರಕ್ಕೆ ಒದಗಿಸತಕ್ಕದ್ದು;

(ಡಿ) ಪ್ರಾಧಿಕಾರದ ವಾರ್ಷಿಕ ವರದಿಗಳು ಮತ್ತು ಲೆಕ್ಕಪರಿಶೋಧಿತ ಲೆಕ್ಕಪತ್ರಗಳನ್ನು ಪ್ರಾಧಿಕಾರಕ್ಕೆ ಪ್ರತಿಯೊಂದು ಹಣಕಾಸಿನ ವರ್ಷಾಂತ್ಯದ ಮೂರು ತಿಂಗಳುಗಳ ಒಳಗೆ ಸಿದ್ಧಪಡಿಸಿ, ಅನುಮೋದನೆಗಾಗಿ ಸಲ್ಲಿತಕ್ಕದ್ದು ಹಾಗೂ ಆ ತರುವಾಯ ಅವುಗಳ ಪ್ರತಿಗಳನ್ನು ಪ್ರಾಧಿಕಾರಕ್ಕೆ ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು; ಮತ್ತು

(ಇ) ನಿಯಮಿಸಬಹುದಾದ ಅಂಥ ಇತರ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

**9. ಲೆಕ್ಕಪತ್ರ ಅಧಿಕಾರಿ ಮತ್ತು ಇತರ ಅಧಿಕಾರಿಗಳ ನೇಮಕಾತಿ.-** (1) ರಾಜ್ಯ ಸರ್ಕಾರವು, ರಾಜ್ಯ ಲೆಕ್ಕಪತ್ರಗಳ ಸೇವೆಯ ಸಹಾಯಕ ನಿಯಂತ್ರಕರ ದರ್ಜೆಗಿಂತ ಕಡಿಮೆಯಲ್ಲದ ಒಬ್ಬ ಅಧಿಕಾರಿಯನ್ನು ಪ್ರಾಧಿಕಾರದ ಲೆಕ್ಕಪತ್ರಗಳ ಅಧಿಕಾರಿಯನ್ನಾಗಿ ನೇಮಿಸತಕ್ಕದ್ದು.

(2) ಲೆಕ್ಕಪತ್ರ ಅಧಿಕಾರಿಯು, ಆಯುಕ್ತನ ಮುಂದೆ ಕರ್ತವ್ಯಕ್ಕೆ ಹಾಜರಾಗತಕ್ಕದ್ದು ಹಾಗೂ ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರೆ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

**10. ಅಧಿಕಾರಿಗಳು ಮತ್ತು ಸಿಬ್ಬಂದಿಯ ನೇಮಕಾತಿ ವಿಧಾನ ಮತ್ತು ಸೇವಾ ಷರತ್ತುಗಳು.-** (1) ರಾಜ್ಯ ಸರ್ಕಾರವು, ಪ್ರಾಧಿಕಾರಕ್ಕೆ ಅಗತ್ಯವಿರಬಹುದಾದ ಅಂಥ ಇತರ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಒದಗಿಸತಕ್ಕದ್ದು. ಪ್ರಾಧಿಕಾರದ ಆಯುಕ್ತನ, ಅಧಿಕಾರಿಗಳ ಹಾಗೂ ಸಿಬ್ಬಂದಿಯ

ನೇಮಕಾತಿಯ ವಿಧಾನ ಮತ್ತು ಸೇವಾ ಷರತ್ತುಗಳು ಹಾಗೂ ಅಧಿಕಾರಗಳು ಮತ್ತು ಕರ್ತವ್ಯಗಳು ನಿಯಮಗಳ ಮೂಲಕ ನಿರ್ಧರಿಸಬಹುದಾದಂತೆ ಇರತಕ್ಕದ್ದು.

(2) ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳನ್ನು, ಅಧಿಕಾರಿಗಳ ಮತ್ತು ಸಿಬ್ಬಂದಿಯ ವೇತನ ಮತ್ತು ಭತ್ಯೆಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

## ಅಧ್ಯಾಯ - IV

## ಪ್ರಾಧಿಕಾರದ ಅಧಿಕಾರಗಳು ಮತ್ತು ಪ್ರಕಾರ್ಯಗಳು

**11. ಪ್ರಾಧಿಕಾರದ ಪ್ರಕಾರ್ಯಗಳು.-** ಈ ಅಧಿನಿಯಮದ ಮತ್ತು ಅದರ ಅಡಿಯಲ್ಲಿ ರಚಿಸಿದ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ಪ್ರಾಧಿಕಾರದ ಪ್ರಕಾರ್ಯಗಳು ಈ ಮುಂದಿನಂತಿರತಕ್ಕದ್ದು, ಎಂದರೆ:-

(i) ಪಾರಂಪರಿಕ ಪ್ರದೇಶದ ಸರ್ವೇಕ್ಷಣೆಯನ್ನು ನಡೆಸುವುದು ಮತ್ತು ಹಾಗೆ ನಡೆಸಿದ ಸರ್ವೇಕ್ಷಣೆಯ ವರದಿಯನ್ನು ಸಿದ್ಧಪಡಿಸುವುದು;

(ii) ಪಾರಂಪರಿಕ ಪ್ರದೇಶದ ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು;

(iii) ಸಮಿತಿಯು ಯುಕ್ತವಾಗಿ ಅನುಮೋದಿಸಿದ ಅಭಿವೃದ್ಧಿ ಯೋಜನೆಯಲ್ಲಿ ಉದ್ದೇಶಿಸಲಾದ ಅಂಥ ಕಾಮಗಾರಿಗಳನ್ನು ಕೈಗೊಳ್ಳುವಂತೆ ಮಾಡುವುದು;

(iv) ಸುಸ್ಥಿರ ವಿಧಾನದಲ್ಲಿ ಪಾರಂಪರಿಕ ಪ್ರದೇಶದ ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯವಾಗಿರುವಂಥ ಹಲವಾರು ಸ್ಕೀಂಗಳನ್ನು ರೂಪಿಸುವುದು;

(v) ಸದರಿ ಯೋಜನೆ ಮತ್ತು ಸ್ಕೀಮುಗಳಿಗೆ ಅನುಸಾರವಾಗಿ, ಅಭಿವೃದ್ಧಿ ಯೋಜನೆ, ಪಟ್ಟಣ ಯೋಜನಾ ಸ್ಕೀಮುಗಳು ಮತ್ತು ಪಾರಂಪರಿಕ ಪ್ರದೇಶದ ಅಭಿವೃದ್ಧಿಯನ್ನು ಕಾರ್ಯಗತಗೊಳಿಸುವುದನ್ನು ಖಚಿತಗೊಳಿಸುವುದು ಮತ್ತು ಸಮನ್ವಯಗೊಳಿಸುವುದು;

(vi) ಪಾರಂಪರಿಕ ಪ್ರದೇಶದ ಅಭಿವೃದ್ಧಿಗಾಗಿ ಯಾವುದೇ ಯೋಜನೆ ಅಥವಾ ಸ್ಕೀಮುಗಳಿಗೆ ಹಣವನ್ನು ಸಂಗ್ರಹಿಸುವುದು ಮತ್ತು ಅಂಥ ಯೋಜನೆ ಅಥವಾ ಸ್ಕೀಮನ್ನು ಕಾರ್ಯಗತಗೊಳಿಸುವುಕ್ಕಾಗಿ ಆ ಪ್ರದೇಶದ ಸ್ಥಳೀಯ ಪ್ರಾಧಿಕಾರಗಳಿಗೆ ನೆರವು ನೀಡುವುದು;

(vii) ರಾಜ್ಯ ಸರ್ಕಾರವು ವಹಿಸಬಹುದಾದ ಅಥವಾ ಪ್ರಾಧಿಕಾರವು ರಚಿತವಾಗಿರುವ ಉದ್ದೇಶಗಳ ಮುಂದುವರಿಕೆಗಾಗಿ ಅವಶ್ಯವಿರುವ ಇತರ ವಿಷಯಗಳಿಗೆ ಅಗತ್ಯವಾಗಿರಬಹುದಾದ ಅಥವಾ ಅದಕ್ಕೆ ಅನುಷಂಗಿಕವಾದ ಅಥವಾ ಸಹಾಯಕವಾದ ಅಂಥ ಇತರ ಕಾರ್ಯಗಳನ್ನು ಮತ್ತು ಅಗತ್ಯವಾದುದನ್ನು ಮಾಡುವುದು;

(viii) ಪಾರಂಪರಿಕ ಪ್ರದೇಶದ ಯಾವುದೇ ಅಭಿವೃದ್ಧಿ ಯೋಜನೆ ಅಥವಾ ಅಭಿವೃದ್ಧಿಯನ್ನು ಕಾರ್ಯಗತಗೊಳಿಸುವ ಕಾರ್ಯವನ್ನು ಯಾವುದೇ ಸ್ಥಳೀಯ ಪ್ರಾಧಿಕಾರಕ್ಕೆ ಅಥವಾ ಇತರ ಏಜೆನ್ಸಿಗೆ ವಹಿಸಿಕೊಡುವುದು;

(ix) ಪಾರಂಪರಿಕ ಪ್ರದೇಶದ ಪರಿಮಿತಿಯೊಳಗೆ ಅಧಿಕಾರ ವ್ಯಾಪ್ತಿ ಚಲಾಯಿಸುವ ಸ್ಥಳೀಯ ಪ್ರಾಧಿಕಾರಗಳು ಮತ್ತು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ, 1987ರ

(1987ರ ಕರ್ನಾಟಕ ಅಧಿನಿಯಮ 34) ಅಡಿಯಲ್ಲಿ ರಚಿತವಾದ ನಗರಾಭಿವೃದ್ಧಿ ಪ್ರಾಧಿಕಾರವು, ಯಾವುದಾದರೂ ಇದ್ದರೆ, ಅವುಗಳ ಮತ್ತು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಅಭಿವೃದ್ಧಿ ಮಂಡಲಿ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಲಿ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಲಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಮತ್ತು ಪಾರಂಪರಿಕ ಪ್ರದೇಶ ಅಭಿವೃದ್ಧಿ ಕಾರ್ಯಚಟುವಟಿಕೆಗಳಿಗೆ ಸಂಬಂಧಿಸಿದ ಅಂಥ ಇತರ ನಿಕಾಯಗಳ ಕಾರ್ಯಚಟುವಟಿಕೆಗಳನ್ನು ಸಮನ್ವಯಗೊಳಿಸುವುದು;

(x) ಯೋಜನೆಯ ಅಡಿಯಲ್ಲಿ ವಹಿಸಿದ ವೆಚ್ಚದ ಪ್ರಗತಿಯ ಹಾಗೂ ಕಾರ್ಯನಿರ್ವಹಣೆಯ ಬಗ್ಗೆ ಮೇಲ್ವಿಚಾರಣೆ ನಡೆಸುವುದು ಮತ್ತು ಪುನರೀಕ್ಷಿಸುವುದು;

(xi) ಪಾರಂಪರಿಕ ಪ್ರದೇಶದೊಳಗಿನ ಸಾರ್ವಜನಿಕ ಸ್ವತ್ತನ್ನು ಸಂರಕ್ಷಿಸಲು ಕ್ರಮಕೈಕೊಳ್ಳುವುದು;

(xii) ಲಕ್ಕುಂಡಿ ಪಾರಂಪರಿಕ ಪ್ರದೇಶದ ಪುರಾತತ್ವ ಮಹತ್ವದ ಬಗ್ಗೆ ಸ್ಥಳೀಯ, ಪ್ರಾದೇಶಿಕ, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಅರಿವು ಮೂಡಿಸುವುದು;

(xiii) ಲಕ್ಕುಂಡಿ ಪಾರಂಪರಿಕ ಪ್ರದೇಶದ ಪುರಾತತ್ವ, ಐತಿಹಾಸಿಕ ಮತ್ತು ಪರಿಸರ ಸಂಬಂಧಿ ಮೌಲ್ಯಗಳನ್ನು ತಿಳಿದುಕೊಳ್ಳುವುದಕ್ಕಾಗಿ ಸೂಕ್ತ ಸಂಶೋಧನೆ ನಡೆಸಲು ಉತ್ತೇಜಿಸುವುದು ಮತ್ತು ಪ್ರೋತ್ಸಾಹಿಸುವುದು;

(xiv) ನಿಯಮಿಸಬಹುದಾದ ಅಂಥ ಇತರ ಪ್ರಕಾರ್ಯಗಳನ್ನು ನಿರ್ವಹಿಸುವುದು.

**12. ಅಧ್ಯಕ್ಷರ ವಿಶೇಷ ಅಧಿಕಾರಗಳು.-** ಪ್ರಾಧಿಕಾರದ ಸಭೆಯನ್ನು ಕರೆಯಲು ಸಾಕಷ್ಟು ಸಮಯವಿಲ್ಲದಿರುವ ತುರ್ತು ಸನ್ನಿವೇಶಗಳಲ್ಲಿ, ಉದ್ದೇಶಗಳ ಪರಿಣಾಮಕಾರಿ ಈಡೇರಿಕೆಗಾಗಿ ಸ್ವತಃ ಕಾರ್ಯ ಪ್ರವೃತ್ತವಾಗಲು ಮತ್ತು ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಲು, ಅಧ್ಯಕ್ಷರಿಗೆ ವಿಶೇಷ ಅಧಿಕಾರವಿರತಕ್ಕದ್ದು. ಅಧ್ಯಕ್ಷರು ಕ್ರಮ ತೆಗೆದುಕೊಂಡು ಪ್ರಾಧಿಕಾರದ ಮುಂದಿನ ತಕ್ಷಣದ ಸಭೆಯಲ್ಲಿ ವಿಷಯವನ್ನು ಪ್ರಾಧಿಕಾರದ ಮುಂದೆ ಮಂಡಿಸತಕ್ಕದ್ದು ಮತ್ತು ಅದನ್ನು ಊರ್ಜಿತಗೊಳಿಸುವಂತೆ ಕೋರತಕ್ಕದ್ದು.

**13. ಪ್ರತ್ಯಾಯೋಜನೆಗೆ ಅಧಿಕಾರ.-** ಪ್ರಾಧಿಕಾರವು, ಅಧಿಸೂಚನೆಯ ಮೂಲಕ, ಪರಿನಿಯಮಗಳ ರಚನಾಧಿಕಾರವನ್ನು ಹೊರತುಪಡಿಸಿ, ಈ ಅಧಿನಿಯಮದ ಅಡಿಯಲ್ಲಿ ಅದು ಚಲಾಯಿಸಬಹುದಾದ ಯಾವುದೇ ಅಧಿಕಾರವನ್ನು, ಅಧ್ಯಕ್ಷರು ಅಥವಾ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ಪ್ರಾಧಿಕಾರದ ಅಂಥ ಅಧಿಕಾರಿಯು ಸಹ, ಅದರಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ನಿರ್ಬಂಧಗಳು ಮತ್ತು ಷರತ್ತುಗಳಿಗೆ ಒಳಪಟ್ಟು, ಚಲಾಯಿಸಲು ನಿರ್ದೇಶನ ನೀಡಬಹುದು.

**14. ಪ್ರಾಧಿಕಾರದ ಅನುಮತಿ ಇಲ್ಲದೆ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಕೂಡದು.-** (1) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಪ್ರಾಧಿಕಾರದ ಪೂರ್ವಸಮಾಲೋಚನೆ, ಸಮ್ಮತಿ ಮತ್ತು ಲಿಖಿತ ಅನುಮತಿಯ ಹೊರತಾಗಿ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಪಾರಂಪರಿಕ ಪ್ರದೇಶದೊಳಗೆ, ಯಾವುದೇ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ಯಾವುದೇ ಅಭಿವೃದ್ಧಿಗಾಗಿ, ಪಾರಂಪರಿಕ ಪ್ರದೇಶದೊಳಗೆ, ಅಂಥ ಅಭಿವೃದ್ಧಿಗಾಗಿ ಪ್ರಾಧಿಕಾರವು ಅನುಮತಿಯನ್ನು ನೀಡಿದ್ದ ಹೊರತು, ಯಾವುದೇ ಸ್ಥಳೀಯ ಪ್ರಾಧಿಕಾರವು ಅನುಮತಿಯನ್ನು ನೀಡತಕ್ಕದ್ದಲ್ಲ.

(3) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ಅಭಿವೃದ್ಧಿಯನ್ನು ಕೈಗೊಳ್ಳಲು ಇಚ್ಛಿಸುವ ಯಾವುದೇ ಪ್ರಾಧಿಕಾರವು ಅಥವಾ ವ್ಯಕ್ತಿಯು ಅಂಥ ಅಭಿವೃದ್ಧಿಯನ್ನು ಕೈಗೊಳ್ಳಲು ಅನುಮತಿಯನ್ನು ಕೋರಿ ಪ್ರಾಧಿಕಾರಕ್ಕೆ ಲಿಖಿತದಲ್ಲಿ ಅರ್ಜಿಯನ್ನು ಸಲ್ಲಿಸತಕ್ಕದ್ದು.

(4) ಪ್ರಾಧಿಕಾರವು, ತಾನು ಅವಶ್ಯಕವೆಂದು ಭಾವಿಸುವ ಅಂಥ ವಿಚಾರಣೆಯನ್ನು ನಡೆಸಿದ ತರುವಾಯ, ತಾನು ವಿಧಿಸುವುದು ಸೂಕ್ತವೆಂದು ಭಾವಿಸಬಹುದಾದ ಅಂಥ ಷರತ್ತುಗಳಿಲ್ಲದೆ ಅಥವಾ ಷರತ್ತುಗಳೊಡನೆ ಅಂಥ ಅನುಮತಿಯನ್ನು ನೀಡಬಹುದು ಅಥವಾ ಅಂಥ ಅನುಮತಿಯನ್ನು ನೀಡಲು ನಿರಾಕರಿಸಬಹುದು.

(5) (4)ನೇ ಉಪಪ್ರಕರಣದ ಅಡಿಯಲ್ಲಿ ಪ್ರಾಧಿಕಾರದ ತೀರ್ಮಾನದಿಂದ ಬಾಧಿತವಾದ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು, ತೀರ್ಮಾನದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಅಂಥ ತೀರ್ಮಾನದ ವಿರುದ್ಧ ರಾಜ್ಯ ಸರ್ಕಾರಕ್ಕೆ ಅಪೀಲನ್ನು ಸಲ್ಲಿಸಬಹುದು, ಅದರ ತೀರ್ಮಾನವು ಅಂತಿಮವಾಗಿರತಕ್ಕದ್ದು:

ಪರಂತು, ಅಂಥ ಅಪೀಲನ್ನು ಸಲ್ಲಿಸುವ ಬಾಧಿತ ಪ್ರಾಧಿಕಾರವು, ಕೇಂದ್ರ ಸರ್ಕಾರದ ಆಡಳಿತ ನಿಯಂತ್ರಣದಲ್ಲಿದ್ದರೆ, ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದೊಡನೆ ಸಮಾಲೋಚನೆ ನಡೆಸಿದ ತರುವಾಯ ಅಪೀಲನ್ನು ಕುರಿತು ತೀರ್ಮಾನ ಕೈಗೊಳ್ಳತಕ್ಕದ್ದು.

(6) ಯಾವೊಬ್ಬ ವ್ಯಕ್ತಿ ಅಥವಾ ಪ್ರಾಧಿಕಾರವು, (5)ನೇ ಉಪಪ್ರಕರಣದಲ್ಲಿ ಮಾರ್ಪಡಿಸಲಾದಂತೆ, (4)ನೇ ಉಪಪ್ರಕರಣದ ಅಡಿಯಲ್ಲಿ ನೀಡಿದ ತೀರ್ಮಾನಕ್ಕೆ ವಿರುದ್ಧವಾಗಿ ಯಾವುದೇ ಕಾರ್ಯವನ್ನು ಕೈಗೊಂಡಿದ್ದರೆ, ಅಂಥ ತೀರ್ಮಾನಕ್ಕೆ ವಿರುದ್ಧವಾಗಿ ಕೈಗೊಂಡ ಯಾವುದೇ ಅಭಿವೃದ್ಧಿ ಕಾಮಗಾರಿಯನ್ನು ಕೆಡಹುವ, ನಾಶಪಡಿಸುವ ಅಥವಾ ತೆಗೆದುಹಾಕುವ ಅಧಿಕಾರವನ್ನು ಮತ್ತು ಅಂಥ ಕೆಡಹುವ, ನಾಶಪಡಿಸುವ ಅಥವಾ ತೆಗೆದುಹಾಕುವ ವೆಚ್ಚವನ್ನು ಸಂಬಂಧಪಟ್ಟ ವ್ಯಕ್ತಿಯಿಂದ ಅಥವಾ ಪ್ರಾಧಿಕಾರದಿಂದ, ಕಾನೂನಿನ ಸೂಕ್ತ ಪ್ರಕ್ರಿಯೆಗಳನ್ನು ಅನುಸರಿಸಿ ವಸೂಲ್ಮಾಡುವ ಅಧಿಕಾರವನ್ನು ಪ್ರಾಧಿಕಾರವು ಹೊಂದಿರತಕ್ಕದ್ದು.

**15. ಪ್ರವೇಶಕ್ಕೆ ಅಧಿಕಾರ.-** ಪ್ರಾಧಿಕಾರವು, ಯಾವುದೇ ಭೂಮಿ ಅಥವಾ ಕಟ್ಟಡವನ್ನು, ಕೆಲಸಗಾರರ ಸಹಾಯ ಪಡೆದು ಅಥವಾ ಸಹಾಯವನ್ನು ಪಡೆಯದೆ,-

(ಎ) ಅಂಥ ಭೂಮಿ ಅಥವಾ ಕಟ್ಟಡಕ್ಕಾಗಿ ಯಾವುದೇ ವಿಚಾರಣೆ, ತಪಾಸಣೆ, ಅಳತೆ ಅಥವಾ ಸಮೀಕ್ಷೆ ಅಥವಾ ಮಟ್ಟಮಾಡುವ;

(ಬಿ) ನಿರ್ಮಾಣದಲ್ಲಿರುವ ಕಾಮಗಾರಿಗಳನ್ನು ಪರೀಕ್ಷಿಸುವ ಮತ್ತು ಒಳಚರಂಡಿ ಹಾಗೂ ಚರಂಡಿಗಳ ಮಾರ್ಗವನ್ನು ಖಚಿತಪಡಿಸಿಕೊಳ್ಳುವ;

(ಸಿ) ಒಳ ಮಣ್ಣಿನಲ್ಲಿ ತೋಡುವ ಅಥವಾ ಕೊರೆಯುವ;

(ಡಿ) ಕಾಮಗಾರಿಯ ಗಡಿಗಳನ್ನು ಮತ್ತು ಉದ್ದೇಶಿತ ರೇಖೆಗಳನ್ನು ಹಾಕುವ;

(ಇ) ಗುರುತುಗಳನ್ನು ಹಾಕುವ ಹಾಗೂ ಕಂದಕಗಳನ್ನು ತೋಡುವ ಮೂಲಕ ಅಂಥ ಮಟ್ಟಗಳನ್ನು, ಗಡಿಗಳನ್ನು ಮತ್ತು ರೇಖೆಗಳನ್ನು ಹಾಕುವ;

(ಎಫ್) ಯಾವುದೇ ಯೋಜನೆಯನ್ನು ಉಲ್ಲಂಘಿಸಿ ಅಥವಾ ಯಾವ ಷರತ್ತುಗಳಿಗೆ ಒಳಪಟ್ಟು ಅಂಥ ಅನುಮತಿಯನ್ನು ನೀಡಲಾಗಿತ್ತೋ ಆ ಷರತ್ತುಗಳನ್ನು ಉಲ್ಲಂಘಿಸಿ ಯಾವುದೇ ಭೂಮಿಯನ್ನು ಅಭಿವೃದ್ಧಿಪಡಿಸಲಾಗುತ್ತಿದೆಯೇ ಅಥವಾ ಅಭಿವೃದ್ಧಿಪಡಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವ; ಅಥವಾ

(ಜಿ) ಈ ಅಧಿನಿಯಮದ ದಕ್ಷ ಆಡಳಿತಕ್ಕಾಗಿ ಅವಶ್ಯಕವಾದ ಇತರ ಯಾವುದೇ ಕಾರ್ಯಗಳನ್ನು ಮಾಡುವ,

- ಉದ್ದೇಶಕ್ಕಾಗಿ ಪ್ರವೇಶಿಸಲು ಯಾವೊಬ್ಬ ವ್ಯಕ್ತಿಯನ್ನು ಪ್ರಾಧೀಕರಿಸಬಹುದು:

ಪರಂತು,-

(i) ಸೂರ್ಯೋದಯ ಮತ್ತು ಸೂರ್ಯಾಸ್ತದೊಳಗಿನ ಅವಧಿಯ ಹೊರತಾಗಿ ಮತ್ತು ಅಧಿಭೋಗದಾರನಿಗೆ ಅಥವಾ ಅಲ್ಲಿ ಯಾವೊಬ್ಬ ಅಧಿಭೋಗದಾರನು ಇರದಿದ್ದರೆ, ಭೂಮಿಯ ಅಥವಾ ಕಟ್ಟಡದ ಮಾಲೀಕನಿಗೆ ಸೂಕ್ತ ನೋಟೀಸನ್ನು ನೀಡದೆ ಹಾಗೆ ಪ್ರವೇಶಿಸತಕ್ಕದ್ದಲ್ಲ;

(ii) ಮಹಿಳೆಯರು ಅಥವಾ ಮಕ್ಕಳು, ಯಾರಾದರೂ ಇದ್ದರೆ ಅವರು, ಅಂಥ ಭೂಮಿ ಅಥವಾ ಕಟ್ಟಡದಿಂದ ಹೊರ ಹೋಗಲು ಸಾಕಷ್ಟು ಅವಕಾಶವನ್ನು ಪ್ರತಿ ಸಂಧರ್ಭದಲ್ಲಿಯೂ ನೀಡತಕ್ಕದ್ದು; ಮತ್ತು

(iii) ಸಾಧ್ಯವಾದಷ್ಟು ಮಟ್ಟಿಗೆ ಪ್ರವೇಶ ಮಾಡಿದ ಉದ್ದೇಶದ ಜರೂರು ಅವಶ್ಯಕತೆಗೆ ಅನುಗುಣವಾಗಿ, ಪ್ರವೇಶಿಸಿದ ಭೂಮಿ ಅಥವಾ ಕಟ್ಟಡದ ಅಧಿಭೋಗದಾರನ ಸಾಮಾಜಿಕ ಮತ್ತು ಧಾರ್ಮಿಕ ಆಚರಣೆಗೆ ಯಾವಾಗಲೂ ಸೂಕ್ತ ಗಮನ ನೀಡತಕ್ಕದ್ದು.

**16. ಶುಲ್ಕ ವಿಧಿಸುವುದು.-** (1) 14ನೇ ಪ್ರಕರಣದ ಅಡಿಯಲ್ಲಿ ಅನುಮತಿಗಳ ನೀಡಿಕೆಗಾಗಿ ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ, ಅಂಥ ದರದಲ್ಲಿ ಶುಲ್ಕವನ್ನು ವಿಧಿಸುವುದು ಪ್ರಾಧಿಕಾರಕ್ಕೆ ಕಾನೂನುಬದ್ಧವಾಗಿರತಕ್ಕದ್ದು.

(2) ಈ ಅಧಿನಿಯಮದ ಅಡಿಯಲ್ಲಿ ಸಂಗ್ರಹಿಸಿದ ಎಲ್ಲಾ ಶುಲ್ಕಗಳನ್ನು ಪ್ರಾಧಿಕಾರದ ನಿಧಿಗೆ ಜಮಾ ಮಾಡತಕ್ಕದ್ದು.

**17. ಪ್ರಾಧಿಕಾರದ ನಿಧಿ.-** (1) ಪ್ರಾಧಿಕಾರವು, `ಪ್ರಾಧಿಕಾರ ನಿಧಿ' ಎಂದು ಕರೆಯಲಾಗುವ ಒಂದು ನಿಧಿಯನ್ನು ಹೊಂದಿರತಕ್ಕದ್ದು, ಇದನ್ನು ಪ್ರಾಧಿಕಾರವು ಪ್ರಾಧೀಕರಿಸಬಹುದಾದಂತೆ ಅಂಥ ಅಧಿಕಾರಿಗಳು ನಿರ್ವಹಿಸತಕ್ಕದ್ದು.

(2) ಪ್ರಾಧಿಕಾರವು, ಈ ಅಧಿನಿಯಮದ ಎಲ್ಲ ಅಥವಾ ಯಾವುವೇ ಉದ್ದೇಶಗಳಿಗಾಗಿ, ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಸ್ಥಳೀಯ ಪ್ರಾಧಿಕಾರ, ಯಾವುದೇ ಅಂತರರಾಷ್ಟ್ರೀಯ ಸಂಘ ಸಂಸ್ಥೆಯಿಂದ ಅಥವಾ ಯಾವೊಬ್ಬ ವ್ಯಕ್ತಿಯಿಂದ ಅಥವಾ ನಿಗಮಿತವಾಗಿರುವ ಅಥವಾ ಆಗಿಲ್ಲದಿರುವ ಒಂದು ನಿಕಾಯದಿಂದ ಅನುದಾನಗಳು, ಧನ ಸಹಾಯಗಳು, ಕೊಡುಗೆಗಳು, ಕಾಣಿಕೆಗಳು ಮತ್ತು ದಾನಗಳನ್ನು ಸ್ವೀಕರಿಸಬಹುದು.

(3) ಪ್ರಾಧಿಕಾರವು ಸ್ವಂತ ಸಂಪನ್ಮೂಲಗಳಿಂದ ತನ್ನ ಆಡಳಿತ ವೆಚ್ಚಗಳನ್ನು ಭರಿಸಲು ಸಮರ್ಥವಾಗುವವರೆಗೆ ಪ್ರಾಧಿಕಾರದ ಆಡಳಿತ ವೆಚ್ಚಗಳಿಗೆ ಸಮನಾದ ಮೊತ್ತದ ಅನುದಾನವನ್ನು ರಾಜ್ಯ ಸರ್ಕಾರವು, ಪ್ರಾಧಿಕಾರಕ್ಕೆ ಪ್ರತಿವರ್ಷವು ನೀಡತಕ್ಕದ್ದು.

(4) ಈ ಅಧಿನಿಯಮದ ಬಲದಿಂದ, ಪ್ರಾಧಿಕಾರವು ಅಥವಾ ಅದರ ಪರವಾಗಿ ಸ್ವೀಕರಿಸಿದ ಎಲ್ಲಾ ಹಣವನ್ನು ಮತ್ತು ಪ್ರಾಧಿಕಾರಕ್ಕೆ ಪ್ರಾಪ್ತವಾಗುವ ಎಲ್ಲಾ ಬಡ್ಡಿ, ಲಾಭ ಮತ್ತು ಸಾಲವಾಗಿ ಪಡೆದ ಹಣವನ್ನು ನಿಧಿಗೆ ಜಮೆ ಮಾಡತಕ್ಕದ್ದು.

(5) ರಾಜ್ಯ ಸರ್ಕಾರವು, ಅನ್ಯಥಾ ನಿರ್ದೇಶಿಸಿದ ಹೊರತಾಗಿ, ಪೂರ್ವೋಕ್ತ ಉಪಬಂಧಗಳಲ್ಲಿ ನಿರ್ದಿಷ್ಟಪಡಿಸಿದ ಮತ್ತು ನಿಧಿಯ ಭಾಗವಾಗುವ ಎಲ್ಲಾ ಹಣ ಮತ್ತು ಸ್ವೀಕೃತಿಗಳನ್ನು, ಭಾರತದ ರಿಸರ್ವ್ ಬ್ಯಾಂಕ್ ಅಧಿನಿಯಮ, 1934ರಲ್ಲಿ (1934ರ ಕೇಂದ್ರ ಅಧಿನಿಯಮ) ಪರಿಭಾಷಿಸಿದಂತೆ ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಠೇವಣಿ ಇಡತಕ್ಕದ್ದು ಅಥವಾ ರಾಜ್ಯ ಸರ್ಕಾರವು ಅನುಮೋದಿಸಬಹುದಾದ ಅಂಥ ಭದ್ರತೆಗಳಲ್ಲಿ ತೊಡಗಿಸಬಹುದು.

(6) ನಿಧಿಯನ್ನು ಮತ್ತು ಪ್ರಾಧಿಕಾರದಲ್ಲಿ ನಿಹಿತವಾಗುವ ಎಲ್ಲ ಇತರ ಸ್ವತ್ತುಗಳನ್ನು ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು ಮತ್ತು ಉದ್ದೇಶಗಳಿಗಾಗಿ ಅದು ಧಾರಣ ಮಾಡತಕ್ಕದ್ದು ಮತ್ತು ವಿನಿಯೋಗಿಸತಕ್ಕದ್ದು.

**18. ಆಯವ್ಯಯ.-** ಪ್ರಾಧಿಕಾರವು, ಪ್ರತಿವರ್ಷವು, ನಿಯಮಿಸಬಹುದಾದ ಅಂಥ ನಮೂನೆಯಲ್ಲಿ ಮತ್ತು ಅಂಥ ಕಾಲದಲ್ಲಿ, ಮುಂದಿನ ಆರ್ಥಿಕ ವರ್ಷದ ಸಂಬಂಧದಲ್ಲಿ, ಪ್ರಾಧಿಕಾರದ ಸ್ವೀಕೃತಿಗಳು ಮತ್ತು ಬಟವಾಡೆಗಳನ್ನು ತೋರಿಸುವ ವಾರ್ಷಿಕ ಆಯವ್ಯಯ ಅಂದಾಜನ್ನು ಸಿದ್ಧಪಡಿಸತಕ್ಕದ್ದು ಮತ್ತು ರಾಜ್ಯ ಸರ್ಕಾರಕ್ಕೆ ಅದರ ಒಂದು ಪ್ರತಿಯನ್ನು ಸಲ್ಲಿಸತಕ್ಕದ್ದು.

**19. ವಾರ್ಷಿಕ ವರದಿ.-** ಪ್ರಾಧಿಕಾರವು, ಪ್ರತಿಯೊಂದು ವರ್ಷದ ಮುಕ್ತಾಯದ ತರುವಾಯ, ನಿಯಮಿಸಬಹುದಾದ ಅಂಥ ನಮೂನೆಯಲ್ಲಿ ಮತ್ತು ಅಂಥ ದಿನಾಂಕಕ್ಕೆ ಮೊದಲು, ಅಂಥ ವರ್ಷದಲ್ಲಿಯ ಅದರ ಕಾರ್ಯಚಟುವಟಿಕೆಗಳ ಒಂದು ವರದಿಯನ್ನು ಸಿದ್ಧಪಡಿಸತಕ್ಕದ್ದು ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ರಾಜ್ಯ ಸರ್ಕಾರವು, ಅಂಥ ವರದಿಯ ಒಂದು ಪ್ರತಿಯನ್ನು ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮುಂದೆ ಮಂಡಿಸುವಂತೆ ಮಾಡತಕ್ಕದ್ದು.

**20. ಪ್ರಾಧಿಕಾರಕ್ಕೆ ಧನ ಸಹಾಯ ಮತ್ತು ಸಾಲಗಳು.-** (1) ರಾಜ್ಯ ಸರ್ಕಾರವು ನಿರ್ಧರಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ರಾಜ್ಯ ಸರ್ಕಾರವು, ಕಾಲಕಾಲಕ್ಕೆ ಈ ಅಧಿನಿಯಮದ ಉದ್ದೇಶಗಳಿಗಾಗಿ ಪ್ರಾಧಿಕಾರಕ್ಕೆ ಧನ ಸಹಾಯವನ್ನು ನೀಡಬಹುದು.

(2) ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂತೆ, ರಾಜ್ಯ ಸರ್ಕಾರವು ನಿರ್ಧರಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ರಾಜ್ಯ ಸರ್ಕಾರವು, ಕಾಲಕಾಲಕ್ಕೆ ಪ್ರಾಧಿಕಾರಕ್ಕೆ ಮುಂಗಡ ಸಾಲಗಳನ್ನು ನೀಡಬಹುದು.

**21. ಸಾಲವನ್ನು ಪಡೆಯಲು ಪ್ರಾಧಿಕಾರಕ್ಕೆ ಇರುವ ಅಧಿಕಾರ.-** ಪ್ರಾಧಿಕಾರವು, ಕಾಲಕಾಲಕ್ಕೆ ರಾಜ್ಯ ಸರ್ಕಾರದ ಪೂರ್ವಮಂಜೂರಾತಿಯೊಂದಿಗೆ ಮತ್ತು ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು ಹಾಗೂ ಈ ಸಂಬಂಧದಲ್ಲಿ ನಿಯಮಿಸಬಹುದಾದ ಅಂಥ ಷರತ್ತುಗಳಿಗೊಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ ಅಗತ್ಯವಾದ ಯಾವುದೇ ಮೊತ್ತವನ್ನು ಸಾಲವನ್ನಾಗಿ ಪಡೆಯಬಹುದು.

**22. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.-** (1) ಪ್ರಾಧಿಕಾರವು, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ನಿಯಮಗಳಲ್ಲಿ ಅಗತ್ಯಪಡಿಸಬಹುದಾದಂತೆ, ಸರಿಯಾದ ಲೆಕ್ಕ ಪುಸ್ತಕಗಳನ್ನು ಮತ್ತು ಇತರ ಪುಸ್ತಕಗಳನ್ನು ನಿರ್ವಹಿಸುವಂತೆ ಮಾಡತಕ್ಕದ್ದು ಮತ್ತು ಅಂಥ ನಿಯಮಗಳಿಗನುಸಾರವಾಗಿ ಲೆಕ್ಕಪತ್ರಗಳ ವಾರ್ಷಿಕ ವಿವರ ಪಟ್ಟಿಗಳನ್ನು ಸಿದ್ಧಪಡಿಸತಕ್ಕದ್ದು.

(2) ಪ್ರಾಧಿಕಾರವು, ಅದರ ಲೆಕ್ಕಪತ್ರಗಳನ್ನು ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರಗಳ ಇಲಾಖೆ ಇವರಿಂದ ವಾರ್ಷಿಕವಾಗಿ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ಪ್ರಾಧಿಕಾರದ ಲೆಕ್ಕಪತ್ರಗಳ ಲೆಕ್ಕಪರಿಶೋಧನೆ ಮಾಡಿದ ಮೇಲೆ, ಕೂಡಲೇ ಅದರ ಒಂದು ಪ್ರತಿಯನ್ನು, ಅದರ ಮೇಲಿನ ಲೆಕ್ಕಪರಿಶೋಧನೆಯ ವರದಿಯ ಒಂದು ಪ್ರತಿಯೊಡನೆ ಪ್ರಾಧಿಕಾರವು, ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು ಮತ್ತು ನಿಯಮಿಸಲಾದ ವಿಧಾನದಲ್ಲಿ ಲೆಕ್ಕಪತ್ರಗಳನ್ನು ಪ್ರಕಟಿಸುವಂತೆ ಮಾಡತಕ್ಕದ್ದು ಮತ್ತು ಸೂಕ್ತ ಬೆಲೆಯಲ್ಲಿ ಮಾರಾಟ ಮಾಡಲು ಅವುಗಳ ಪ್ರತಿಗಳನ್ನು ಇಡತಕ್ಕದ್ದು.

(4) ರಾಜ್ಯ ಸರ್ಕಾರವು, ಲೆಕ್ಕಪರಿಶೋಧಕರ ವರದಿಯನ್ನು ಪರಿಶೀಲಿಸಿದ ತರುವಾಯ ನೀಡಲು ಸೂಕ್ತವೆಂದು ಅದು ಭಾವಿಸುವ ಅಂಥ ನಿರ್ದೇಶನಗಳನ್ನು ಪ್ರಾಧಿಕಾರವು ಪಾಲಿಸತಕ್ಕದ್ದು.

## ಅಧ್ಯಾಯ -V
## ಸಂಕೀರ್ಣ ವಿಷಯಗಳು

**23. ಪ್ರಾಧಿಕಾರದಿಂದ ನಿರ್ದೇಶನಗಳು.-** (1) ಪ್ರಾಧಿಕಾರವು, 11ನೇ ಪ್ರಕರಣದ ಅಥವಾ ಯಾವುದೇ ಪಟ್ಟಣ ಯೋಜನೆಯ ಸ್ಕೀಮಿನ ಅಡಿಯಲ್ಲಿ ರೂಪಿಸಿದ ಯೋಜನೆಗಳು ಮತ್ತು ಸ್ಕೀಮುಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಯಾವುದೇ ಸ್ಥಳೀಯ ಪ್ರಾಧಿಕಾರಕ್ಕೆ, ಸಂಬಂಧಪಟ್ಟ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿಗೆ, ಕರ್ನಾಟಕ ವಿದ್ಯುಚ್ಛಕ್ತಿ ಪ್ರಸರಣ ನಿಗಮಕ್ಕೆ ಮತ್ತು ಪಾರಂಪರಿಕ ಪ್ರದೇಶದಲ್ಲಿಯ ಅಭಿವೃದ್ಧಿ ಚಟುವಟಿಕೆಗಳಿಗೆ ಸಂಬಂಧಪಟ್ಟ ಅಂಥ ಇತರ ನಿಕಾಯಗಳಿಗೆ ನಿರ್ದೇಶನಗಳನ್ನು ನೀಡಬಹುದು.

(2) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಅಂಥ ಪ್ರತಿಯೊಂದು ನಿರ್ದೇಶನವನ್ನು, ಅದನ್ನು ಯಾವ ನಿಕಾಯಕ್ಕೆ ನೀಡಲಾಗಿದೆಯೋ ಆ ನಿಕಾಯವು ಪಾಲಿಸತಕ್ಕದ್ದು. ತಪ್ಪಿದರೆ, ಪ್ರಾಧಿಕಾರವು (1)ನೇ ಉಪಪ್ರಕರಣದ ಅಡಿಯಲ್ಲಿ ನೀಡಿದ ನಿರ್ದೇಶನಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಅವಶ್ಯಕ ಕ್ರಮಕೈಗೊಳ್ಳಲು ಮತ್ತು ಅದಕ್ಕಾಗಿ ಯಾವುದೇ ವೆಚ್ಚವನ್ನು ವಹಿಸಿದ್ದರೆ ಅದನ್ನು ಸಂಬಂಧಪಟ್ಟ ನಿಕಾಯದಿಂದ ವಸೂಲ್ಮಾಡಲು ಸಕ್ಷಮವಾಗಿರತಕ್ಕದ್ದು.

**24. ಅಧಿನಿಯಮದ ಉಪಬಂಧಗಳ ಉಲ್ಲಂಘನೆಗಾಗಿ ದಂಡ.-** ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ಮಾಡಿದ ಅಥವಾ ಮಂಜೂರಾದ ಯಾವುದೇ ನಿಯಮ, ವಿನಿಯಮ ಅಥವಾ ಉಪವಿಧಿ ಅಥವಾ ಸ್ಕೀಮಿನ ಉಪಬಂಧಗಳನ್ನು ಉಲ್ಲಂಘಿಸುವ ಯಾವೊಬ್ಬನು, ಒಂದು ವರ್ಷದವರೆಗೆ ವಿಸ್ತರಿಸಬಹುದಾದ ಅವಧಿಯ ಕಾರಾವಾಸದಿಂದ ಅಥವಾ ಹತ್ತು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಅವೆರಡರಿಂದಲೂ ಮತ್ತು ಉಲ್ಲಂಘನೆಯು ಮುಂದುವರಿಯುತ್ತಿರುವ ಸಂದರ್ಭದಲ್ಲಿ, ಒಂದು ತಿಂಗಳ ಅವಧಿಯವರೆಗೆ ವಿಸ್ತರಿಸಬಹುದಾದ ಹೆಚ್ಚುವರಿ ಕಾರಾವಾಸದಿಂದ ಅಥವಾ ಮೊದಲ ಅಪರಾಧ ಉಲ್ಲಂಘನೆಯ ತರುವಾಯ ಅಪರಾಧ

ಉಲ್ಲಂಘನೆಯು ಮುಂದುವರಿದ ಅವಧಿಯಲ್ಲಿ ಪ್ರತಿದಿನಕ್ಕೆ ಐದುನೂರು ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು.

**25. ಕಂಪನಿಗಳಿಂದ ಅಪರಾಧಗಳು.-** (1) ಈ ಅಧಿನಿಯಮದ ಅಡಿಯಲ್ಲಿ ಅಪರಾಧವನ್ನು ಮಾಡುವ ವ್ಯಕ್ತಿಯು ಒಂದು ಕಂಪನಿಯಾಗಿದ್ದರೆ, ಅಪರಾಧ ಘಟಿಸುವ ಕಾಲದಲ್ಲಿ ಅದರ ವ್ಯವಹಾರಗಳನ್ನು ನಡೆಸುವುದಕ್ಕಾಗಿ ಕಂಪನಿಯ ಪ್ರಭಾರದಲ್ಲಿದ್ದ ಮತ್ತು ಕಂಪನಿಗೆ ಹೊಣೆಗಾರನಾಗಿದ್ದ ಪ್ರತಿಯೊಬ್ಬ ವ್ಯಕ್ತಿಯನ್ನು ಹಾಗೂ ಕಂಪನಿಯನ್ನು ಅಪರಾಧದ ತಪ್ಪಿತಸ್ಥನೆಂದು ಭಾವಿಸತಕ್ಕದ್ದು ಮತ್ತು ಆತನು ತನ್ನ ವಿರುದ್ಧದ ಕಾನೂನು ವ್ಯವಹರಣೆಗೆ ಗುರಿಯಾಗತಕ್ಕದ್ದು ಮತ್ತು ತದನುಸಾರವಾಗಿ ದಂಡಿತನಾಗತಕ್ಕದ್ದು:

ಪರಂತು, ಈ ಉಪಪ್ರಕರಣದಲ್ಲಿರುವುದು ಯಾವುದೂ, ಅಪರಾಧವು ತನ್ನ ತಿಳಿವಳಿಕೆಗೆ ಬರದೇ ಘಟಿಸಿತೆಂದು ಅಥವಾ ಅಂಥ ಅಪರಾಧ ಘಟಿಸುವುದನ್ನು ತಪ್ಪಿಸುವುದಕ್ಕಾಗಿ ಸೂಕ್ತ ಜಾಗರೂಕತೆಯನ್ನು ವಹಿಸಿದ್ದನೆಂದು ಆತನು ರುಜುವಾತುಪಡಿಸಿದರೆ, ಅಂಥ ವ್ಯಕ್ತಿಯನ್ನು ಈ ಅಧಿನಿಯಮದಲ್ಲಿ ಉಪಬಂಧಿಸಿದ ಯಾವುದೇ ಶಿಕ್ಷೆಗೆ ಗುರಿಯಾಗುವಂತೆ ಮಾಡತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಈ ಅಧಿನಿಯಮದ ಅಡಿಯಲ್ಲಿ ಒಂದು ಅಪರಾಧವನ್ನು ಕಂಪೆನಿಯು ಮಾಡಿದ್ದಲ್ಲಿ ಮತ್ತು ಅಪರಾಧವು ಕಂಪೆನಿಯ ಯಾವೊಬ್ಬ ನಿರ್ದೇಶಕ, ವ್ಯವಸ್ಥಾಪಕ, ಕಾರ್ಯದರ್ಶಿ ಅಥವಾ ಇತರ ಅಧಿಕಾರಿಯ ಸಮ್ಮತಿಯಿಂದ ಅಥವಾ ಪರೋಕ್ಷ ಸಮ್ಮತಿಯಿಂದ ಅಥವಾ ಅವನ ಕಡೆಯಿಂದಾದ ಯಾವುದೇ ನಿರ್ಲಕ್ಷ್ಯದ ಕಾರಣದಿಂದ ಘಟಿಸಿತೆಂದು ರುಜುವಾತಾದರೆ, ಕಂಪೆನಿಯ ಅಂಥ ನಿರ್ದೇಶಕ, ವ್ಯವಸ್ಥಾಪಕ, ಕಾರ್ಯದರ್ಶಿ ಅಥವಾ ಇತರ ಅಧಿಕಾರಿಯನ್ನು ಸಹ ಆ ಅಪರಾಧದ ದೋಷಿಯೆಂದು ಭಾವಿಸತಕ್ಕದ್ದು ಮತ್ತು ಅವರು ತಮ್ಮ ವಿರುದ್ಧದ ವ್ಯವಹರಣೆಗೆ ಗುರಿಯಾಗತಕ್ಕದ್ದು ಮತ್ತು ತದನುಸಾರವಾಗಿ ದಂಡಿತರಾಗತಕ್ಕದ್ದು.

**ವಿವರಣೆ:-** ಈ ಪ್ರಕರಣದ ಉದ್ದೇಶಕ್ಕಾಗಿ,-

(ಎ) ``ಕಂಪೆನಿ'' ಎಂದರೆ, ಒಂದು ನಿಗಮಿತ ನಿಕಾಯ ಮತ್ತು ಇದು ಒಂದು ಫರ್ಮ್ ಅಥವಾ ವ್ಯಕ್ತಿಗಳ ಇತರ ಸಂಸ್ಥೆಯನ್ನು ಒಳಗೊಳ್ಳುತ್ತದೆ; ಮತ್ತು

(ಬಿ) ಫರ್ಮಿನ ಸಂಬಂಧದಲ್ಲಿ ``ನಿರ್ದೇಶಕ'' ಎಂದರೆ ಫರ್ಮಿನ ಒಬ್ಬ ಪಾಲುದಾರ.

**26. ಅಭಿಯೋಜನೆಗಾಗಿ ಅನುಮತಿ.-** ಈ ಅಧಿನಿಯಮದ ಅಡಿಯಲ್ಲಿ ದಂಡನೀಯವಾದ ಯಾವುದೇ ಅಪರಾಧಕ್ಕಾಗಿ, ಪ್ರಾಧಿಕಾರದ ಅಥವಾ ಈ ಸಂಬಂಧದಲ್ಲಿ ಪ್ರಾಧಿಕಾರದಿಂದ ಪ್ರಾಧಿಕೃತನಾದ ಯಾವೊಬ್ಬ ಅಧಿಕಾರಿಯ ಪೂರ್ವಾನುಮೋದನೆ ಹೊರತಾಗಿ ಯಾವುದೇ ಅಭಿಯೋಜನೆಯನ್ನು ಹೂಡತಕ್ಕದ್ದಲ್ಲ.

**27. ಪ್ರಾಧಿಕಾರವು ತನ್ನ ಅಥವಾ ಅದರ ವಿರುದ್ಧದ ಕ್ಲೇಮುಗಳನ್ನು ಸಂಧಾನ ಮಾಡಿಕೊಳ್ಳುವುದು.-** ಪ್ರಾಧಿಕಾರವು, ಅದು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಯಾವುದೇ ಕ್ರಮ ಅಥವಾ ದಾವೆಯಿಂದ ಉದ್ಭವಿಸಿದ ಕ್ಲೇಮು ಅಥವಾ ತಗಾದೆಯ ಬಗ್ಗೆ ತಾನು ಸಾಕಷ್ಟೆಂದು ಭಾವಿಸಬಹುದಾದ ಅಂಥ ಮೊತ್ತ ಅಥವಾ ಇತರ ಪರಿಹಾರಕ್ಕಾಗಿ ರಾಜಿ ಅಥವಾ ಸಂಧಾನ ಮಾಡಿಕೊಳ್ಳಬಹುದು:

ಪರಂತು, ಐವತ್ತು ಸಾವಿರ ರೂಪಾಯಿಗಳನ್ನು ಮೀರುವ ಅಂಥ ಯಾವುದೇ ಕ್ಲೇಮು ಅಥವಾ ತಗಾದೆಯನ್ನು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯ ಹೊರತಾಗಿ ರಾಜಿ ಮಾಡಿಕೊಳ್ಳತಕ್ಕದ್ದಲ್ಲ ಅಥವಾ ಸಂಧಾನ ಮಾಡಿಕೊಳ್ಳತಕ್ಕದ್ದಲ್ಲ.

**28. ಸದಸ್ಯರು ಮತ್ತು ಅಧಿಕಾರಿಗಳು ಲೋಕ ನೌಕರರಾಗಿರುವುದು.-** ಪ್ರಾಧಿಕಾರದ ಪ್ರತಿಯೊಬ್ಬ ಸದಸ್ಯ, ಪ್ರತಿಯೊಬ್ಬ ಅಧಿಕಾರಿ ಮತ್ತು ಇತರ ನೌಕರರು ಭಾರತ ದಂಡ ಸಂಹಿತೆಯ 21ನೇ ಪ್ರಕರಣದ ಅರ್ಥವ್ಯಾಪ್ತಿಯಲ್ಲಿ ಲೋಕ ನೌಕರರಾಗಿರತಕ್ಕದ್ದು.

**29. ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ.-** ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿಸಿದ ಯಾವುದೇ ನಿಯಮ ಅಥವಾ ವಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ಯಾವೊಬ್ಬ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಅಭಿಯೋಜನೆ ಅಥವಾ ಇತರ ಕಾನೂನು ವ್ಯವಹರಣೆಗಳು ಇರತಕ್ಕದ್ದಲ್ಲ.

**30. ರಾಜ್ಯ ಸರ್ಕಾರದಿಂದ ನಿಯಂತ್ರಣ, ಇತ್ಯಾದಿ.-** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಅವಶ್ಯಕ ಅಥವಾ ಯುಕ್ತವೆಂದು ತಾನು ಅಭಿಪ್ರಾಯಪಡುವ ಅಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ನೀಡಬಹುದು. ಪ್ರಾಧಿಕಾರವು, ಈ ಅಧಿನಿಯಮದ ದಕ್ಷ ಆಡಳಿತ ನಿರ್ವಹಣೆಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡಬಹುದಾದ ಅಂಥ ನಿರ್ದೇಶನಗಳನ್ನು ನೆರವೇರಿಸತಕ್ಕದ್ದು ಮತ್ತು ಅಂಥ ನಿರ್ದೇಶನಗಳನ್ನು ಪಾಲಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು.

(2) ರಾಜ್ಯ ಸರ್ಕಾರವು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ವರದಿಗಳು ಮತ್ತು ಇತರ ಮಾಹಿತಿಯನ್ನು ಪ್ರಾಧಿಕಾರವು ರಾಜ್ಯ ಸರ್ಕಾರಕ್ಕೆ ಒದಗಿಸತಕ್ಕದ್ದು.

(3) ಈ ಅಧಿನಿಯಮದ ಅಡಿಯಲ್ಲಿ, ಪ್ರಾಧಿಕಾರವು ತನ್ನ ಅಧಿಕಾರಗಳನ್ನು ಚಲಾಯಿಸುವಲ್ಲಿ ಅಥವಾ ತನ್ನ ಪ್ರಕಾರ್ಯಗಳನ್ನು ನೆರವೇರಿಸುವಲ್ಲಿ ಅಥವಾ ಆ ಸಂಬಂಧದಲ್ಲಿ, ಪ್ರಾಧಿಕಾರ ಮತ್ತು ಒಂದು ಸ್ಥಳೀಯ ಪ್ರಾಧಿಕಾರದ ನಡುವೆ ಯಾವುದೇ ವಿವಾದ ಉದ್ಭವಿಸಿದರೆ, ಅಂಥ ವಿವಾದದ ಮೇಲೆ ರಾಜ್ಯ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

**31. ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ 1974ನ್ನು (1974ರ ಕರ್ನಾಟಕ ಅಧಿನಿಯಮ 32) ಪ್ರಾಧಿಕಾರದ ಆವರಣಕ್ಕೆ ಅನ್ವಯಿಸುವುದು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಒಳಪಟ್ಟು ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಅಂಥ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ, ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು (1974ರ ಕರ್ನಾಟಕ ಅಧಿನಿಯಮ 32) ಪ್ರಾಧಿಕಾರಕ್ಕೆ ಸೇರಿದ, ಅದರಲ್ಲಿ ನಿಹಿತವಾದ ಅಥವಾ ಅದು ಗುತ್ತಿಗೆಗೆ ಕೊಟ್ಟ ಆವರಣಗಳಿಗೆ ಅನ್ವಯಿಸತಕ್ಕದ್ದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಅಧಿಸೂಚನೆಯನ್ನು ಹೊರಡಿಸಿದ ತರುವಾಯ, ಮೇಲ್ಕಂಡ ಅಧಿನಿಯಮವು ಮತ್ತು ಅದರಡಿ ರಚಿಸಿದ ನಿಯಮಗಳು ಈ ಮುಂದಿನ ಮಾರ್ಪಾಡುಗಳೊಡನೆ ಪ್ರಾಧಿಕಾರಕ್ಕೆ ಸೇರಿದ ಆವರಣಗಳಿಗೆ ಅನ್ವಯವಾಗತಕ್ಕದ್ದು, ಎಂದರೆ,-

(ಎ) ರಾಜ್ಯ ಸರ್ಕಾರವು, ಅದು ಸೂಕ್ತವೆಂದು ಭಾವಿಸುವಂತೆ, ರಾಜ್ಯ ಸರ್ಕಾರದ ಅಥವಾ ಪ್ರಾಧಿಕಾರದ ಒಬ್ಬ ಅಧಿಕಾರಿಯನ್ನು ಮೇಲ್ಕಂಡ ಅಧಿನಿಯಮದ ಉದ್ದೇಶಗಳಿಗಾಗಿ ಸಕ್ಷಮ ಪ್ರಾಧಿಕಾರಿ ಎಂದು ನೇಮಿಸಬಹುದು;

(ಬಿ) ಆ ಅಧಿನಿಯಮದಲ್ಲಿ ಮತ್ತು ಆ ನಿಯಮಗಳಲ್ಲಿ ``ಸಾರ್ವಜನಿಕ ಆವರಣ''ಕ್ಕೆ ಮಾಡಿದ ಉಲ್ಲೇಖಗಳು ಪ್ರಾಧಿಕಾರದ ಆವರಣಕ್ಕೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು ಮತ್ತು ಆ ಅಧಿನಿಯಮದ 6, 7, 8, 13, 14, 15, ಮತ್ತು 16ನೇ ಪ್ರಕರಣಗಳಲ್ಲಿ ``ರಾಜ್ಯ ಸರ್ಕಾರ''ಕ್ಕೆ ಮಾಡಿದ ಉಲ್ಲೇಖಗಳನ್ನು, ಪ್ರಾಧಿಕಾರಕ್ಕೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು.

**32. ಅಧಿನಿಯಮವು ಇತರ ಕಾನೂನುಗಳಿಗೆ ಅಧ್ಯಾರೋಹಿಯಾಗಿರುವುದು .-** ಈ ಅಧಿನಿಯಮದ ಉಪಬಂಧಗಳು, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಅದಕ್ಕೆ ಅಸಂಗತವಾದುದು ಏನೇ ಒಳಗೊಂಡಿದ್ದರೂ ಪರಿಣಾಮಕಾರಿಯಾಗಿರತಕ್ಕದ್ದು.

**33. ಅನುಸೂಚಿಯನ್ನು ತಿದ್ದುಪಡಿ ಮಾಡುವ ಅಧಿಕಾರ.-**(1) ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ಅನುಸೂಚಿಯಲ್ಲಿ ಯಾವುವೇ ನಮೂದುಗಳನ್ನು ಸೇರಿಸಬಹುದು, ತಿದ್ದುಪಡಿ ಮಾಡಬಹುದು ಅಥವಾ ಬಿಟ್ಟುಬಿಡಬಹುದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಹೊರಡಿಸಿದ ಪ್ರತಿಯೊಂದು ಅಧಿಸೂಚನೆಯನ್ನು ಪೂರ್ವ ಪ್ರಕಟಣೆಯ ತರುವಾಯ ರಾಜ್ಯವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

(3) ರಾಜ್ಯ ಸರ್ಕಾರವು, ಪಾರಂಪರಿಕ ಪ್ರದೇಶದ ಭೂಗೋಳ-ದರ್ಶಿಕೆ (ಜಿಯೋ-ಸ್ಪೇಷಿಯಲ್) ನಕ್ಷೆಯನ್ನು ಸಹ ಅಧಿಸೂಚಿಸಬಹುದು.

**34. ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ಪೂರ್ವ ಪ್ರಕಟಣೆಯ ತರುವಾಯ ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಅದನ್ನು ಹಾಗೆ ಮಂಡಿಸಲಾದ ಅಧಿವೇಶನವು ಅಥವಾ ಅದರ ನಿಕಟೋತ್ತರ ಅಧಿವೇಶನವು ಮುಕ್ತಾಯವಾಗುವ ಮೊದಲು ಆ ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಬೇಕೆಂದು ಉಭಯ ಸದನಗಳು ಒಪ್ಪಿದರೆ ಅಥವಾ ಯಾವುದೇ ನಿಯಮವನ್ನು ರಚಿಸಕೂಡದೆಂದು ನಿರ್ಧರಿಸಿದರೆ, ಆ ತರುವಾಯ ಆ ನಿಯಮವು ಹಾಗೆ ಮಾರ್ಪಾಡಾದ ರೂಪದಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗಿರತಕ್ಕದ್ದಲ್ಲ. ಆದಾಗ್ಯೂ ಅಂಥ ಮಾರ್ಪಾಡು ಅಥವಾ ರದ್ದತಿಯು, ಆ ನಿಯಮದ ಅಡಿಯಲ್ಲಿ ಈ ಹಿಂದೆ ಮಾಡಿದ ಯಾವುದೇ ಕಾರ್ಯದ ಮಾನ್ಯತೆಗೆ ಪ್ರತಿಕೂಲವನ್ನು ಉಂಟು ಮಾಡತಕ್ಕದ್ದಲ್ಲ.

**35. ವಿನಿಯಮಗಳನ್ನು ರಚಿಸುವ ಅಧಿಕಾರ.-** ಪ್ರಾಧಿಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸಲು ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 34ನೇ ಪ್ರಕರಣದ ಅಡಿಯಲ್ಲಿ ಮಾಡಿದ ನಿಯಮಗಳಿಗೆ ಒಳಪಟ್ಟು ಹಾಗೂ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

**36. ತೊಂದರೆಗಳ ನಿವಾರಣೆ.-** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಆದೇಶವನ್ನು ಪ್ರಕಟಿಸುವ ಮೂಲಕ ತೊಂದರೆಯನ್ನು ನಿವಾರಿಸಲು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂತೆ ಸಂದರ್ಭವು ಅಗತ್ಯಪಡಿಸಬಹುದಾದಂತೆ, ಏನನ್ನೇ ಆಗಲಿ ಮಾಡಬಹುದು:

ಪರಂತು, ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ ಎರಡು ವರ್ಷಗಳ ಮುಕ್ತಾಯದ ತರುವಾಯ, ಈ ಪ್ರಕರಣದ ಅಡಿಯಲ್ಲಿ ಯಾವುದೇ ಆದೇಶವನ್ನು ಮಾಡತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು, ಅದನ್ನು ಪ್ರಕಟಿಸಿದ ತರುವಾಯ ಸಾಧ್ಯವಾದಷ್ಟು ಬೇಗನೇ, ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸತಕ್ಕದ್ದು ಮತ್ತು ರಾಜ್ಯ ವಿಧಾನ ಮಂಡಲವು ಮಾಡಬಹುದಾದ ಯಾವುದೇ ಮಾರ್ಪಾಡಿಗೊಳಪಟ್ಟು, ಈ ಅಧಿನಿಯಮದಲ್ಲಿ ಅಧಿನಿಯಮಿಸಲಾಗಿದ್ದರೆ ಹೇಗೋ ಹಾಗೆ ಪರಿಣಾಮಕಾರಿಯಾಗಿರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ. ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

**ಕರ್ನಾಟಕ ಸರ್ಕಾರ**

ಸಂಖ್ಯೆ: TOR/91/TDA/2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ 22.12.2020

**<u>ಅಧಿಸೂಚನೆ</u>**

ಲಕ್ಕುಂಡಿ ಪ್ರಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ 50) ರ 1ನೇ ಪ್ರಕರಣದ (2)ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಅಧಿನಿಯಮವನ್ನು ದಿನಾಂಕ: 21.12.2020 ರಿಂದ ಜಾರಿಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ನಾಗರಾಜ್. ಆರ್)**
ಸರ್ಕಾರದ ಉಪ ಕಾರ್ಯದರ್ಶಿ
ಪ್ರವಾಸೋದ್ಯಮ ಇಲಾಖೆ